ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 297 RNI Number : KNKAN/25/A2770 10-11-2026 Tuesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ:297 ರಾಯಚೂರು 10-11-2026 ಮಂಗಳವಾರ ಪುಟ 04 ಬೆಲೆ ರೂ.2/- Postal Reg Number:RCR/L/RNP/117/2026-28

ಸಿದ್ದರಾಮಯ್ಯ ಹಾಗೂ ನನ್ನ ನಡುವೆ ಯಾವುದೇ ಮುನಿಸಿಲ್ಲ: ಸಿಎಂ ಡಿಕೆಶಿ

ಬೆಂಗಳೂರು: ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ನನ್ನ ನಡುವೆ ದೊಡ್ಡ ಮುನಿಸೂ ಇಲ್ಲ, ಸಣ್ಣ ಮುನಿಸೂ ಇಲ್ಲ. ಕೆಲವರು ನಮ್ಮ ನಡುವೆ ಮುನಿಸು ಇದೆ ಎಂಬ ವಾತಾವರಣ ಸೃಷ್ಟಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಸಿಎಂ ಡಿ.ಕೆ.ಶಿವಕುಮಾರ್ ತಿರುಗೇಟು ನೀಡಿದ್ದಾರೆ.

ಮೇಖ್ರಿ ವೃತ್ತ ಹಾಗೂ ಟೌನ್ ಹಾಲ್ ಬಳಿ ಶಿವಕುಮಾರ್ ಅವರು ಮಾಧ್ಯಮಗಳೊಂದಿಗೆ ಮಾತನಾಡುತ್ತಾ, ರಾಜಕಾರಣದಲ್ಲಿ ನಿಂದಕರು ಇರಬೇಕು, ವಿರೋಧಿಗಳು ಇರಬೇಕು. ಅವರೆಲ್ಲ ಇದ್ದಾಗಲೇ ನಮ್ಮಂತಹವರು ಶುದ್ಧ ರಾಜಕಾರಣ ಮಾಡಲು ಸಾಧ್ಯ. ಸಿದ್ದರಾಮಯ್ಯ ಅವರು ನಮ್ಮ ನಾಯಕರು. ಮಹಾಸ್ವಾಮಿಗಳೂ ಸೇರಿದಂತೆ ಕೆಲವರು ಮಾಧ್ಯಮಗಳಲ್ಲಿ ವಿಭಿನ್ನ ರೀತಿಯಲ್ಲಿ ಬಿಂಬಿಸುತ್ತಿದ್ದಾರೆ. ಈ ವಿಚಾರಗಳಿಗೆ ಸಂಬಂಧಿಸಿದಂತೆ ನಾವು ಅವರಿಗೆ ತಿಳಿಸಬೇಕಾದ ವಿಷಯಗಳನ್ನು ಈಗಾಗಲೇ ತಿಳಿಸಿದ್ದೇವೆ ಎಂದರು.

ಸಿದ್ದರಾಮಯ್ಯ ನಮ್ಮ ನಾಯಕರು. ಸ್ಥಳೀಯ ಸಂಸ್ಥೆಗಳ ಚುನಾವಣೆ ಸಮೀಪಿಸುತ್ತಿದೆ. ಹೀಗಾಗಿ ಅವರ ಬಳಿ ಅನೇಕ ವಿಚಾರಗಳನ್ನು ಚರ್ಚೆ ಮಾಡಬೇಕಾದ್ದರಿಂದ ಅವರನ್ನು ಭೇಟಿ ಮಾಡಿ ಹಬ್ಬದ ಶುಭಾಶಯ ಕೋರಿದ್ದೇನೆ ಎಂದು ಹೇಳಿದರು.

ಮೇಖ್ರಿ ವೃತ್ತದ ಬಳಿ ಉದ್ದೇಶಿತ ಎಲಿವೇಟೆಡ್ ಕಾರಿಡಾರ್ ಹಾಗೂ ಸುರಂಗ ಮಾರ್ಗದ ಯೋಜನೆ ಕುರಿತು ಪ್ರತಿಕ್ರಿಯಿಸಿ, ನಾವು ಸುರಂಗ ರಸ್ತೆ ನಿರ್ಮಿಸಿದರೂ ಪ್ರತಿಪಕ್ಷಗಳಿಗೆ ಆಕ್ಷೇಪ, ಎಲಿವೇಟೆಡ್ ಕಾರಿಡಾರ್ ನಿರ್ಮಿಸಿದರೂ ಆಕ್ಷೇಪ. ಅವರು ಯಾವಾಗಲೂ ನಕಾರಾತ್ಮಕವಾಗಿಯೇ ಯೋಚಿಸುತ್ತಾರೆ. ಬೆಂಗಳೂರಿನ ಸಂಚಾರ ದಟ್ಟಣೆ ನಿವಾರಣೆಯಾಗಬೇಕಾದರೆ ಪರ್ಯಾಯ ಮಾರ್ಗಗಳನ್ನು ಕಲ್ಪಿಸಲೇಬೇಕು. ರಸ್ತೆಯನ್ನು ಮೇಲ್ಭಾಗದಲ್ಲಿ ನಿರ್ಮಿಸಬೇಕು ಅಥವಾ ಭೂಮಿಯೊಳಗೆ ಸುರಂಗ ಮಾರ್ಗ ಮಾಡಬೇಕು. ಕಟ್ಟಡಗಳನ್ನು ತೆರವುಗೊಳಿಸಿ ರಸ್ತೆ ಅಗಲ ಮಾಡಲು ಆಗುತ್ತದೆಯೇ ಎಂದು ಹೇಳಿದರು.



ಬೆಂಗಳೂರಿನ ಕೆಲವು ಪ್ರದೇಶಗಳಲ್ಲಿ ರಸ್ತೆ ಅಗಲೀಕರಣಕ್ಕಾಗಿ ರಕ್ಷಣಾ ಇಲಾಖೆಯ ಜಾಗವನ್ನು ಕೇಳಲಾಗಿದೆ. ಈಗಾಗಲೇ ರಕ್ಷಣಾ ಸಚಿವರ ಬಳಿ ಮೇಖ್ರಿ ವೃತ್ತದ ಬಳಿಯ ಮೂಲೆಯಲ್ಲಿರುವ ಜಾಗವನ್ನು ನೀಡುವಂತೆ ಮನವಿ ಮಾಡಿದ್ದೇನೆ. ಆ ಜಾಗ ದೊರೆತರೆ ಅಲ್ಲಿ ಸಂಚಾರ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆ ತರಬಹುದು. ಒಂದು ವೃತ್ತದ ಸುತ್ತ ಮತ್ತೊಂದು ವೃತ್ತದ ಮಾದರಿಯಲ್ಲಿ ರೋಟರಿ ಸರ್ಕಲ್ ಹಾಗೂ ರಿಂಗ್ ವ್ಯವಸ್ಥೆ ರೂಪಿಸಲಾಗುವುದು. ಎಡಕ್ಕೆ ಹೋಗುವವರು ಎಡಕ್ಕೆ, ಬಲಕ್ಕೆ ಹೋಗುವವರು ಬಲಕ್ಕೆ ಸಾಗುವಂತೆ ವ್ಯವಸ್ಥೆ ಮಾಡಲಾಗುವುದು. ಮೇಲ್ಭಾಗದಲ್ಲಿ ಸಂಚಾರಕ್ಕೆ ಅವಕಾಶ ಕಲ್ಪಿಸುವುದರ ಜೊತೆಗೆ ಅಗತ್ಯವಿರುವ ಕಡೆ ಸುರಂಗ ಮಾರ್ಗವನ್ನೂ ಬಳಸಿಕೊಳ್ಳಲಾಗುವುದು ಎಂದು ವಿವರಿಸಿದರು.

ಕಾಮಗಾರಿ ವೇಳೆ ಯಾವುದೇ ರೀತಿಯ ಸಂಚಾರವನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸುವುದಿಲ್ಲ. ಸಂಚಾರ ಪೊಲೀಸರು ಈಗಾಗಲೇ ಯೋಜನೆಯನ್ನು ಪರಿಶೀಲಿಸಿದ್ದಾರೆ. ಇತ್ತೀಚೆಗೆ ಬಿಡಿಎ ಅಧ್ಯಕ್ಷರೂ ಸ್ಥಳ ಪರಿಶೀಲನೆ ನಡೆಸಿದ್ದಾರೆ. ನಾನೂ ಸ್ಥಳಕ್ಕೆ ಭೇಟಿ ನೀಡಿ, ಯಾವ ಭಾಗದಲ್ಲಿ ಸಂಚಾರ ದಟ್ಟಣೆ ಹೆಚ್ಚಾಗುತ್ತಿದೆ ಎಂಬುದನ್ನು ಪರಿಶೀಲಿಸುವಂತೆ ಸೂಚಿಸಿದ್ದೇನೆ. ಕಾಮಗಾರಿ ನಡೆಯುವ ಸಂದರ್ಭದಲ್ಲಿ ಕೆಲವು ದೊಡ್ಡ ವಾಹನಗಳು ಹಾಗೂ ಸರಕು ಸಾಗಣೆ ವಾಹನಗಳನ್ನು ಮಾತ್ರ ನಿರ್ದಿಷ್ಟ ಸಮಯದಲ್ಲಿ ತಾತ್ಕಾಲಿಕವಾಗಿ ತಡೆಹಿಡಿಯಲಾಗುತ್ತದೆ. ಉಳಿದ ವಾಹನಗಳ ಸಂಚಾರವನ್ನು ಸ್ಥಗಿತಗೊಳಿಸುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಕಾಮಗಾರಿಯಿಂದ ಸಾರ್ವಜನಿಕರಿಗೆ ತೊಂದರೆಯಾಗದಂತೆ ಪರ್ಯಾಯ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಇದಕ್ಕಾಗಿ ಸುಮಾರು 9 ಕೋಟಿ ರೂಪಾಯಿ ವೆಚ್ಚವಾಗಲಿದೆ. ಸುತ್ತಮುತ್ತಲಿನ ಸಂಪರ್ಕ ರಸ್ತೆಗಳ ಅಭಿವೃದ್ಧಿ ಕಾರ್ಯವನ್ನು ಬಿಡಿಎ ಕೈಗೆತ್ತಿಕೊಳ್ಳಲು ಈಗಾಗಲೇ ಸಿದ್ಧತೆ ಮಾಡಿಕೊಳ್ಳುತ್ತಿದೆ ಎಂದರು.

ವಿರೋಧಿಸುವವರನ್ನು ಒಪ್ಪಿಸುವ ಅಗತ್ಯ ಇಲ್ಲ: ಅಭಿವೃದ್ಧಿ ಕಾಮಗಾರಿಗಳ ಸಂದರ್ಭದಲ್ಲಿ ಸಣ್ಣಪುಟ್ಟ ಸಮಸ್ಯೆಗಳು ಎದುರಾಗುವುದು ಸಹಜ. ಜನರನ್ನು ಹೇಗೆ ವಿಶ್ವಾಸಕ್ಕೆ ತೆಗೆದುಕೊಳ್ಳುತ್ತೀರಿ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ವಿರೋಧ ಮಾಡುವವರನ್ನು ಒಪ್ಪಿಸುವ ಅಗತ್ಯವಿಲ್ಲ. ಒಂದು ವರ್ಗದ ಜನರು ನಾನು ಏನೇ ಮಾಡಿದರೂ ವಿರೋಧಿಸಬೇಕೆಂದು ನಿರ್ಧರಿಸಿದಂತಿದೆ. ಬಿಜೆಪಿ ಅಧಿಕಾರದಲ್ಲಿದ್ದಾಗ ಇಂತಹ ಯಾವುದೇ ಕೆಲಸ ಮಾಡಿದ್ದಾರೆಯೇ? ಜೆಡಿಎಸ್‌ನವರು ಏನಾದರೂ ಇಂತಹ ಅಭಿವೃದ್ಧಿ ಕಾರ್ಯ ಕೈಗೊಂಡಿದ್ದಾರೆಯೇ? ಡಿ.ಕೆ.ಶಿವಕುಮಾರ್ ಏನೇ ಮಾಡಿದರೂ ವಿರೋಧಿಸಬೇಕು ಎಂದು ಕೆಲವರು ನಿರ್ಧರಿಸಿದ್ದಾರೆ. ಎಲ್ಲದಕ್ಕೂ ವಿರೋಧ ವ್ಯಕ್ತಪಡಿಸುತ್ತಿದ್ದಾರೆ ಎಂದು ಹೇಳಿದರು.

ಇತ್ತೀಚೆಗೆ ಹೆಲಿಕಾಪ್ಟರ್‌ನಲ್ಲಿ ಸಂಚರಿಸುವಾಗ ಸುರಂಗ ಮಾರ್ಗದ ಯೋಜನೆಗೆ ಸಂಬಂಧಿಸಿದ ಸ್ಥಳವನ್ನು ಪರಿಶೀಲಿಸಿದ್ದೇನೆ. ಲಾಲ್‌ಬಾಗ್ ಬಳಿ ಸುರಂಗ ಮಾರ್ಗ ಹಾದುಹೋಗುವ ಪ್ರದೇಶದಲ್ಲಿ ದೊಡ್ಡ ಹಳ್ಳವಿದ್ದು, ಬಂಡೆ ಇರುವ ಸ್ಥಳಕ್ಕೂ ಸುರಂಗ ಹೊರಬರುವ ಸ್ಥಳಕ್ಕೂ ವ್ಯತ್ಯಾಸವಿದೆ. ಈ ಹಿನ್ನೆಲೆಯಲ್ಲಿ ಯಾವುದೇ ತೊಂದರೆಯಾಗದಂತೆ ಪರ್ಯಾಯ ವ್ಯವಸ್ಥೆ ರೂಪಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಪ್ರತಿಪಕ್ಷಗಳ ವಿರೋಧದ ಕುರಿತು ಮಾತನಾಡಿದ ಅವರು, ವಿಪಕ್ಷಗಳ ಕೆಲಸವೇ ವಿರೋಧ ಮಾಡುವುದು ಎಂಬಂತಾಗಿದೆ. ಅಭಿವೃದ್ಧಿಗೂ ವಿರೋಧ,

3ನೇಯ ಪುಟಕ್ಕೆ

ಬೀದಿನಾಯಿಗಳ ದಾಳಿ- ಮೇಕೆ ಸಾವು; ಸಾರ್ವಜನಿಕರಲ್ಲಿ ಆತಂಕ

ಮುದಗಲ್: ಪಟ್ಟಣದ ನೀರದೊಡ್ಡಿ ಮಸ್ಕಿ ರಸ್ತೆ ಲೇಔಟ್‌ನಲ್ಲಿ ಏಕಾಏಕಿ ಐದು ಬೀದಿನಾಯಿಗಳು ಮೇಕೆಯ ಮೇಲೆ ದಾಳಿ ನಡೆಸಿದ್ದು, ನಾಯಿಗಳ ದಾಳಿಗೆ ಮೇಕೆ ಸಾವನ್ನಪ್ಪಿರುವ ಘಟನೆ ನಡೆದಿದೆ.

ಮೌಲಸಾಬ ಆನೆಮಡು ಎಂಬವರಿಗೆ ಸೇರಿದ ಮೇಕೆ ಲೇಔಟ್ ಪ್ರದೇಶದಲ್ಲಿ ಇದ್ದಾಗ ಏಕಾಏಕಿ ಐದು ಬೀದಿನಾಯಿಗಳು ಗುಂಪಾಗಿ ಬಂದು ದಾಳಿ ನಡೆಸಿವೆ. ನಾಯಿಗಳ ದಾಳಿಯಿಂದ ತೀವ್ರವಾಗಿ ಗಾಯಗೊಂಡ ಮೇಕೆ ಸ್ಥಳದಲ್ಲೇ ಮೃತಪಟ್ಟಿದೆ ಎಂದು ತಿಳಿದುಬಂದಿದೆ.



ಈ ಘಟನೆಯಿಂದ ಮೇಕೆ ಮಾಲೀಕರಿಗೆ ಆರ್ಥಿಕ ನಷ್ಟ ಉಂಟಾಗಿದ್ದು, ಬೀದಿನಾಯಿಗಳ ಹಾವಳಿಯಿಂದ ಸ್ಥಳೀಯ ನಿವಾಸಿಗಳು ಆತಂಕಗೊಂಡಿದ್ದಾರೆ.

ಪಟ್ಟಣದ ವಿವಿಧ ಪ್ರದೇಶಗಳಲ್ಲಿ ಬೀದಿನಾಯಿಗಳ ಹಾವಳಿ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಪುರಸಭೆ ಅಧಿಕಾರಿಗಳು ಕೂಡಲೇ ಗಮನಹರಿಸಿ ಬೀದಿನಾಯಿಗಳ ನಿಯಂತ್ರಣಕ್ಕೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಭೋವಿ ಅಭಿವೃದ್ಧಿ ನಿಗಮದ ಭೂ ಒಡೆತನ ಯೋಜನೆಯಲ್ಲಿ ₹19 ಕೋಟಿ ಅವ್ಯವಹಾರ ಆರೋಪ:ಸಿಬಿಐ ತನಿಖೆಗೆ ಒತ್ತಾಯ

ರಾಯಚೂರು

ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಭೂ ಒಡೆತನ ಯೋಜನೆಯಡಿ ರಾಯಚೂರು ಜಿಲ್ಲೆಯ ಮಾನ್ವಿ, ಸಿರವಾರ ಹಾಗೂ ಸಿಂಧನೂರು ತಾಲೂಕುಗಳಲ್ಲಿ ಸುಮಾರು ₹19 ಕೋಟಿ ಅವ್ಯವಹಾರ ನಡೆದಿದೆ ಎಂದು ಕರ್ನಾಟಕ ರಾಜ್ಯ ಭೋವಿ-ವಡ್ಡರ ಸಮಾಜದ ರಾಜ್ಯ ಮಹಿಳಾ ಘಟಕದ ಅಧ್ಯಕ್ಷೆ ಬಿ.ಕೆ. ಜಯಶ್ರೀ ಗಂಭೀರ ಆರೋಪ ಮಾಡಿದರು.

ಈ ಕುರಿತು ಸಮಾಜದ ವ'ುಖಂಡ'ರ'ೊಂದಿಗೆ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ



ಅವರು, ಬಡ ಹಾಗೂ ಭೂರಹಿತ ಕುಟುಂಬಗಳಿಗೆ ಕೃಷಿ ಜಮೀನು ಒದಗಿಸುವ ಸದುದ್ದೇಶದ ಯೋಜನೆಯಲ್ಲಿ ಅಧಿಕಾರಿಗಳು ಮತ್ತು ಮಧ್ಯವರ್ತಿಗಳು ಕೈಜೋಡಿಸಿ ಸರ್ಕಾರದ ಹಣವನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎಂದು ಆರೋಪಿಸಿದರು.

ಯೋಜನೆಯ ನಿಯಮಗಳನ್ನು ಉಲ್ಲಂಘಿಸಿ ಕೃಷಿಗೆ ಯೋಗ್ಯವಲ್ಲದ ಸವಳು ಭೂಮಿ ಹಾಗೂ ಜಾಲಿ ಗಿಡಗಳಿಂದ ಆವೃತವಾಗಿರುವ ಅನುಪಯುಕ್ತ ಜಮೀನುಗಳನ್ನು ಖರೀದಿಸಲಾಗಿದೆ. 2023-24ನೇ ಸಾಲಿನಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದ ಸಮಿತಿಯು 42 ಎಕರೆ ಭೂಮಿ ಖರೀದಿಗೆ ಮಾತ್ರ ಅನುಮತಿ ನೀಡಿದ್ದರೂ, ನಂತರ ಸಮಿತಿಯ ಒಪ್ಪಿಗೆ ಪಡೆಯದೆ ಹಾಗೂ ಕಂದಾಯ ಮತ್ತು ನೀರಾವರಿ ಇಲಾಖೆಯ ಅಧಿಕಾರಿಗಳಿಂದ ಸ್ಥಳ ಪರಿಶೀಲನೆ ನಡೆಸದೆ ಜಮೀನು ಖರೀದಿಸಲಾಗಿದೆ ಎಂದು ದೂರಿದರು.

ಮಾರುಕಟ್ಟೆಯಲ್ಲಿ ಸುಮಾರು ₹4.50 ಲಕ್ಷ ಬೆಲೆ ಬಾಳುವ ಜಮೀನನ್ನು ದಾಖಲೆಗಳಲ್ಲಿ ₹12.50 ಲಕ್ಷ ಎಂದು ನಮೂದಿಸಿ ಹಣದ ಅವ್ಯವಹಾರ ನಡೆಸಲಾಗಿದೆ. 48 ಫಲಾನುಭವಿಗಳಿಂದ ಮಧ್ಯವರ್ತಿಗಳು ಹಣ ವಸೂಲಿ ಮಾಡಿದ್ದು, ಸಾಲ ಮಂಜೂರಾತಿ ಪ್ರಕ್ರಿಯೆಯಲ್ಲಿಯೂ ಕಮಿಷನ್ ಪಡೆಯಲಾಗಿದೆ. ಕೆಲವರ ಹೆಸರಿನಲ್ಲಿ ಜಮೀನು ನೋಂದಣಿಯಾಗಿದ್ದರೂ

3ನೇಯ ಪುಟಕ್ಕೆ

ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ ರಾಮಣ್ಣ ಹವಳೆ ಅವರಿಗೆ

ಸಾಹಿತ್ಯಾಭಿಮಾನಿಗಳಿಂದ ಗೌರವ ಸಮರ್ಪಣೆ



ರಾಯಚೂರು

ಜಿಲ್ಲಾ 12ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿರುವ ಹಿರಿಯ ಸಾಹಿತಿ ರಾಮಣ್ಣ ಹವಳೆ ಅವರ ನಿವಾಸಕ್ಕೆ ತೆರಳಿದ ಸಾಹಿತ್ಯಾಸಕ್ತರು, ಶಿಕ್ಷಕರು ಹಾಗೂ ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು ಅವರನ್ನು ಗೌರವಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಾನ್ವಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷ ಮೂಕಪ್ಪ ಕಟ್ಟಿಮನಿ, ರಾಮಣ್ಣ ಹವಳೆ ಅವರು ಸಾಹಿತ್ಯ, ಸಂಶೋಧನೆ ಮತ್ತು ರಂಗಭೂಮಿ ಕ್ಷೇತ್ರಗಳಲ್ಲಿ ನಿರಂತರವಾಗಿ ತೊಡಗಿಸಿಕೊಂಡು ತಮ್ಮದೇ ಆದ ಛಾಪು ಮೂಡಿಸಿದ್ದಾರೆ. ಅವರ ಬರವಣಿಗೆಯ ವೈವಿಧ್ಯತೆ, ಸಂಶೋಧನಾ ಆಸಕ್ತಿ ಹಾಗೂ ಕನ್ನಡ ಭಾಷೆಯ ಬಗೆಗಿನ ಬದ್ಧತೆ ಸಾಹಿತ್ಯ ಕ್ಷೇತ್ರಕ್ಕೆ ಅಮೂಲ್ಯ ಕೊಡುಗೆಯಾಗಿದೆ ಎಂದು ಹೇಳಿದರು.

ಕನ್ನಡ ಭಾಷೆ, ನೆಲ, ಸಂಸ್ಕೃತಿಯ ಕುರಿತು ವಿಶೇಷ ಅಭಿಮಾನ ಹೊಂದಿರುವ ಹವಳೆ ಅವರು ತಮ್ಮ ಸಾಹಿತ್ಯಿಕ ಸಾಧನೆಗಳ ಮೂಲಕ ಅನೇಕ ಓದುಗರಲ್ಲಿ ಸಾಹಿತ್ಯದ ಆಸಕ್ತಿ ಮೂಡಿಸಿದ್ದಾರೆ. ಇಂತಹ ಹಿರಿಯ ಅನುಭವಿ ಸಾಹಿತಿಗೆ ಜಿಲ್ಲಾ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆಯ ಗೌರವ ಲಭಿಸಿರುವುದು ಜಿಲ್ಲೆಯ ಸಾಹಿತ್ಯ ವಲಯಕ್ಕೆ ಸಂತಸ ತಂದಿದೆ ಎಂದರು.

ಕನ್ನಡ ಸಾಹಿತ್ಯ ಸಮ್ಮೇಳನಗಳು ಭಾಷೆ ಮತ್ತು ಸಂಸ್ಕೃತಿಯ ಸಂರಕ್ಷಣೆಯ ಜತೆಗೆ ಸಾಮಾಜಿಕ ವಿಚಾರಧಾರೆ ಹಾಗೂ ಹೊಸ ತಲೆಮಾರಿನ ಬರಹಗಾರರಿಗೆ ವೇದಿಕೆ ಕಲ್ಪಿಸುವ ಕಾರ್ಯ ಮಾಡಬೇಕು. ಹಿರಿಯ ಸಾಹಿತಿಗಳ ಅನುಭವ

3ನೇಯ ಪುಟಕ್ಕೆ

ಉತ್ತಮ ಆಡಳಿತಕ್ಕೆ ಸರ್ಕಾರಿ ನೌಕರರ ಸಹಕಾರ ಅತ್ಯಗತ್ಯ: ಬಸನಗೌಡ

ಕನ್ನಡ ರಾಜ್ಯೋತ್ಸವ ಆಚರಣೆ, ಮಹಿಳಾ ಘಟಕದ ಪದಗ್ರಹಣ, ವಿವಿಧ ವೃಂದಗಳ ಪದಾಧಿಕಾರಿಗಳಿಗೆ ಸನ್ಮಾನ ಸಮಾರಂಭ

ಸಿಂಧನೂರು: ಸರ್ಕಾರದ ಯೋಜನೆಗಳನ್ನು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಿಸುವಲ್ಲಿ ಸರ್ಕಾರಿ ನೌಕರರ ಪಾತ್ರ ಅನನ್ಯವಾಗಿದೆ. ನೌಕರರ ಸಹಕಾರದಿಂದ ಮಾತ್ರ ಉತ್ತಮ ಆಡಳಿತ ನೀಡಲು ಸಾಧ್ಯ ಎಂದು ವಿಧಾನ ಪರಿಷತ್ ಶಾಸಕ ಬಸನಗೌಡ ಹೇಳಿದರು.



ನಗರದ ಟೌನ್‌ಹಾಲ್‌ನಲ್ಲಿ ಶನಿವಾರ ಸಂಜೆ ಸರ್ಕಾರಿ ನೌಕರರ ಸಂಘದ ವತಿಯಿಂದ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಆಚರಣೆ, ಮಹಿಳಾ ಘಟಕದ ಪದಗ್ರಹಣ ಹಾಗೂ ವಿವಿಧ ವೃಂದಗಳ ಪದಾಧಿಕಾರಿಗಳಿಗೆ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಬಗ್ಗೆ ಸರ್ಕಾರಿ ನೌಕರರಲ್ಲಿ ಪ್ರೀತಿ ಹಾಗೂ ವಿಶ್ವಾಸ ಹೆಚ್ಚಾಗಿದೆ. ಉತ್ತಮ ಆಡಳಿತ ನೀಡಲು ಸರ್ಕಾರಿ ನೌಕರರ ಸಹಕಾರ ಅತ್ಯಗತ್ಯ. ಸರ್ಕಾರಿ ನೌಕರರ ಕೆಲಸಕಾರ್ಯಗಳು ಹಾಗೂ ಅವರ ಸಮಸ್ಯೆಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ನೌಕರರ ಪರವಾಗಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ ಎಂದು ಹೇಳಿದರು.

ಸರ್ಕಾರಿ ಇಲಾಖೆಯಲ್ಲಿ ಉತ್ತಮ ಅಧಿಕಾರಿಗಳಿದ್ದಾರೆ. ಆದರೆ, ಕೆಲವು ದಪ್ಪ ಚರ್ಮದ ಅಧಿಕಾರಿಗಳೂ ಇದ್ದಾರೆ. ನೌಕರರ ಸಮಸ್ಯೆಗಳನ್ನು ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. ನೌಕರರ ಭವನ ನಿರ್ಮಾಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿಗಳ ಗಮನಕ್ಕೆ ತಂದು, ಇದೇ ಮಾರ್ಚ್ ತಿಂಗಳೊಳಗೆ ಭೂಮಿಪೂಜೆ ನೆರವೇರಿಸಲು ಪ್ರಯತ್ನಿಸುತ್ತೇನೆ ಎಂದು ಭರವಸೆ ನೀಡಿದರು.

ಮಾಜಿ ಸಚಿವ ವೆಂಕಟರಾವ್ ನಾಡಗೌಡ ಮಾತನಾಡಿ, ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸವಿದೆ. ಅತಿ ಹೆಚ್ಚು ಜ್ಞಾನಪೀಠ ಪ್ರಶಸ್ತಿಗಳನ್ನು ಪಡೆದ ಹೆಗ್ಗಳಿಕೆ ಕನ್ನಡ ಭಾಷೆಗಿದೆ. ಕನ್ನಡಿಗರ ಹೃದಯವೈಶಾಲ್ಯತೆ ಕೆಲವೊಮ್ಮ

3ನೇಯ ಪುಟಕ್ಕೆ

ಚಂದ್ರಬಂಡಾದಲ್ಲಿ ನ.10ರಿಂದ ಶ್ರೀ ಬಂಡೆ ರಂಗನಾಥಸ್ವಾಮಿ ಜಾತ್ರಾ ಮಹೋತ್ಸವ

ಎತ್ತುಗಳಿಂದ ಕಲ್ಲು ಎಳೆಯುವ ಸ್ಪರ್ಧೆ

ರಾಯಚೂರು

ತಾಲೂಕಿನ ಚಂದ್ರಬಂಡಾ ಗ್ರಾಮದ ಸುಕ್ಷೇತ್ರ ಶ್ರೀ ಬಂಡೆ ರಂಗನಾಥಸ್ವಾಮಿ ದೇವಸ್ಥಾನದ ವತಿಯಿಂದ ದೀಪಾವಳಿ ಹಬ್ಬದ ಪ್ರಯುಕ್ತ ನ.10ರಿಂದ ಮೂರು ದಿನಗಳ ಕಾಲ ಜಾತ್ರಾ ಮಹೋತ್ಸವ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಬುದಯ್ಯ ಸ್ವಾಮಿ ತಿಳಿಸಿದರು.



ನಗರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿವರ್ಷದ ಸಂಪ್ರದಾಯದಂತೆ ಈ ಬಾರಿಯೂ ಜಾತ್ರಾ ಮಹೋತ್ಸವದ ಅಂಗವಾಗಿ ಎತ್ತುಗಳಿಂದ ಭಾರವಾದ ಬಂಡೆ ಕಲ್ಲು ಎಳೆಯುವ ರಾಜ್ಯ ಹಾಗೂ ರಾಷ್ಟ್ರಮಟ್ಟದ ಸ್ಪರ್ಧೆ ಆಯೋಜಿಸಲಾಗಿದೆ. ನ.10ರಂದು ಮಂಗಳವಾರ ಸಂಜೆ 4 ಗಂಟೆಗೆ ಉಚ್ಛಾಯ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು.

ನ.11ರಂದು ಬುಧವಾರ ಬೆಳಿಗ್ಗೆ 9 ಗಂಟೆಗೆ ಕರ್ನಾಟಕ ರಾಜ್ಯದ ಜನರಲ್ ಕೆಟಗರಿ ವಿಭಾಗದ ಎತ್ತುಗಳಿಂದ 11 ಕ್ವಿಂಟಾಲ್ ಭಾರದ ಬಂಡೆ ಕಲ್ಲು ಎಳೆಯುವ ಸ್ಪರ್ಧೆ ನಡೆಯಲಿದೆ. ಈ ಸ್ಪರ್ಧೆಯಲ್ಲಿ ವಿಜೇತರಾಗುವ ಎತ್ತುಗಳಿಗೆ ಪ್ರಥಮ ಬಹುಮಾನ ₹30 ಸಾವಿರ, ದ್ವಿತೀಯ ₹20 ಸಾವಿರ, ತೃತೀಯ ₹10 ಸಾವಿರ, ನಾಲ್ಕನೇ ₹8 ಸಾವಿರ, ಐದನೇ ₹5 ಸಾವಿರ ಹಾಗೂ ಆರನೇ ಬಹುಮಾನ ₹3 ಸಾವಿರ ನೀಡಲಾಗುತ್ತದೆ ಎಂದರು.

ನ.12ರಂದು ಗುರುವಾರ ಬೆಳಿಗ್ಗೆ 9 ಗಂಟೆಗೆ ದೇಶದ ವಿವಿಧ ರಾಜ್ಯಗಳ ಒಂಗೋಲ್ ನ್ಯೂ ಕೆಟಗರಿ ವಿಭಾಗದ ಎತ್ತುಗಳಿಂದ 14 ಕ್ವಿಂಟಾಲ್ ಭಾರದ ಬಂಡೆ ಕಲ್ಲು ಎಳೆಯುವ ಸ್ಪರ್ಧೆ ನಡೆಯಲಿದೆ. ಈ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ ₹50 ಸಾವಿರ, ದ್ವಿತೀಯ ₹40 ಸಾವಿರ, ತೃತೀಯ ₹30 ಸಾವಿರ, ನಾಲ್ಕನೇ ₹20 ಸಾವಿರ, ಐದನೇ ₹10 ಸಾವಿರ, ಆರನೇ ₹8 ಸಾವಿರ, ಏಳನೇ ₹6 ಸಾವಿರ ಹಾಗೂ ಎಂಟನೇ ಬಹುಮಾನ ₹5 ಸಾವಿರ ನೀಡಲಾಗುವುದು ಎಂದು ಹೇಳಿದರು.

ಎರಡೂ ದಿನಗಳ ಸ್ಪರ್ಧೆಗಳಿಗೆ ಚಂದ್ರಬಂಡಾ ಗ್ರಾಮದ ದಾನಿಗಳು ಬಹುಮಾನಗಳನ್ನು ಪ್ರಾಯೋಜಿಸಿದ್ದಾರೆ. ಜಾತ್ರೆಗೆ ಆಗಮಿಸುವ ಭಕ್ತರು ಹಾಗೂ ಸಾರ್ವಜನಿಕರಿಗೆ ನ.11 ಮತ್ತು 12ರಂದು ಅನ್ನದಾನ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿದೆ.

ಜಾತ್ರಾ ಮಹೋತ್ಸವದಲ್ಲಿ ಭಕ್ತರು, ಸುತ್ತಮುತ್ತಲಿನ ಗ್ರಾಮಸ್ಥರು ಹಾಗೂ ಎತ್ತುಗಳ ಸ್ಪರ್ಧೆಯ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಬುದಯ್ಯ ಸ್ವಾಮಿ ಮನವಿ ಮಾಡಿದರು.

ಹೆಚ್ಚಿನ ಮಾಹಿತಿಗಾಗಿ 8660975515, 9740346454 ಸಂಪರ್ಕಿಸಬಹುದು ಎಂದು ತಿಳಿಸಿದರು.

ರಾಜಯ್ಯ ಶೆಟ್ಟಿ, ನರಸಿಂಗರಾವ್ ಕುಲಕರ್ಣಿ ಇದ್ದರು.



ವಾಸವಿನಗರದಲ್ಲಿ ಶಂಕರನಾಗ ಅವರ ಹುಟ್ಟುಹಬ್ಬ ಅದ್ದೂರಿ ಆಚರಣೆ

ರಾಯಚೂರು: ನಗರದ ವಾಸವಿನಗರದ ಶಂಕರ್ ನಾಗ್ ಸಾರಥಿ ಆಟೋ ಚಾಲಕರ ಸಂಘ ರಾಯಚೂರ್ ವತಿಯಿಂದ ಶಂಕರ್ ನಾಗ್ ಅವರ ಹುಟ್ಟುಹಬ್ಬದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ಸದಸ್ಯರು ಹಾಗೂ ಆಟೋ ಚಾಲಕರು, ಶಂಕರ ಅಭಿಮಾನಿಗಳು ಸೇರಿದಂತೆ ಅನೇಕರು ಸೇರಿ ಕೇಕ್ ಕತ್ತರಿಸುವ ಮೂಲಕ ಚಲನಚಿತ್ರ, ನಟ ಶಂಕರನಾಗ ಅವರ 73ರ ಹುಟ್ಟುಹಬ್ಬವನ್ನು ಅದ್ದೂರಿಯಾಗಿ ಆಚರಿಸಿದರು.

ಕನ್ನೇರಿ ಸ್ವಾಮಿಯನ್ನು ಗುಂಡಾ ಕಾಯ್ದೆಯಡಿ ಬಂಧಿಸಿ: ಮಾರುತಿ ಬೌದ್ಧೆ ಆಗ್ರಹ



ಬೀದರ್,

ಕನ್ನೇರಿ ಸ್ವಾಮಿ ಅವರು ಬೀದರ್‌ನಲ್ಲಿ ಈ ಹಿಂದೆ ಬಸವಾದಿ ಶರಣರ ಹೆಸರಿನಲ್ಲಿ ಹಿಂದೂ ಸಮಾವೇಶ ನಡೆಸಿದ್ದಾರೆ. ವಿಜಯಪುರದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಸಂವಿಧಾನದಲ್ಲಿಯೂ ಮನುಸ್ಮೃತಿ ಇದೆ ಎಂಬ ಹೇಳಿಕೆ ನೀಡಿದ್ದಾರೆ. ಆದ್ದರಿಂದ ಕರ್ನಾಟಕ ಸರ್ಕಾರ ಅವರನ್ನು ಗುಂಡಾ ಕಾಯ್ದೆಯಡಿ ಬಂಧಿಸಿ ಜೈಲಿಗಟ್ಟಬೇಕು ಎಂದು ದಲಿತ ಬಂಡಾಯ ಸಮ್ಮೇಳನದ ಸರ್ವಾಧ್ಯಕ್ಷ ಮಾರುತಿ ಬೌದ್ಧೆ ಆಗ್ರಹಿಸಿದರು.

ನಗರದ ಡಾ. ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಶನಿವಾರ ಆಯೋಜಿಸಿದ್ದ ಬೀದರ್ ಜಿಲ್ಲಾ ಪ್ರಥಮ ದಲಿತ ಬಂಡಾಯ ಸಮ್ಮೇಳನದ ಸರ್ವಾಧ್ಯಕ್ಷರ ನುಡಿಗಳನ್ನಾಡಿದ ಅವರು, ಬಸವಣ್ಣನವರು ಮೊಟ್ಟಮೊದಲಿಗೆ ತಮ್ಮ ಮನೆಯಲ್ಲಿಯೇ ಬಂಡಾಯ ಆರಂಭಿಸಿದ್ದರು. ಬೀದರ್‌ನಲ್ಲಿ ಗವಾನ್ ಅವರು ಮದರಸಾ ಮೂಲಕ ಶೈಕ್ಷಣಿಕ ಕೊಡುಗೆ ನೀಡಿದ್ದಾರೆ. ಇಂತಹ ಬಂಡಾಯದ ನೆಲವಾದ ಬೀದರ್‌ನಲ್ಲಿ ನಾವೂ ಅನೇಕ ಹೋರಾಟಗಳನ್ನು ನಡೆಸಿದ್ದೇವೆ ಎಂದರು.

ಡಾ. ಬಿ.ಆರ್. ಅಂಬೇಡ್ಕರ್ ಅವರು ಮೊದಲ ಬಾರಿಗೆ ಶಾಲೆಗೆ ಸೇರಿದ ದಿನ ನವೆಂಬರ್ 7. ಮಹಾರಾಷ್ಟ್ರ ಸರ್ಕಾರ ಈ ದಿನವನ್ನು ವಿದ್ಯಾರ್ಥಿ ದಿನವನ್ನಾಗಿ ಆಚರಿಸುತ್ತಿದೆ. ಅದೇ ರೀತಿ ಕರ್ನಾಟಕದಲ್ಲಿಯೂ ನವೆಂಬರ್ 7 ಅನ್ನು ವಿದ್ಯಾರ್ಥಿ ದಿನವನ್ನಾಗಿ ಆಚರಿಸಲು ಆದೇಶ ಹೊರಡಿಸಬೇಕು ಎಂದು ಮನವಿ ಮಾಡಿದರು.

ಹಿಂದೆ ಸಮಾಜದಲ್ಲಿ ಅಸ್ಪೃಶ್ಯತೆ ವ್ಯಾಪಕವಾಗಿತ್ತು. ಅದರ ವಿರುದ್ಧ ಹಲವು ವರ್ಷಗಳಿಂದ ಹೋರಾಟ ನಡೆಸಿದ್ದೇವೆ. ಇದೀಗ ನಮಗೆ ಭೂಮಿ ಇಲ್ಲದಂತಾಗಿದೆ. ನಾವು ಭೂಮಿ ಸಾಗುವಳಿ ಮಾಡುತ್ತಿದ್ದರೂ ಸಿ-ಫಾರಂ ಸಿಗುತ್ತಿಲ್ಲ. ಬೀದರ್ ಜಿಲ್ಲೆಯಲ್ಲಿ ಸಾಗುವಳಿ ಮಾಡುತ್ತಿರುವವರಿಗೆ ಸಿ-ಫಾರಂ ಕೊಡಿಸಬೇಕು ಎಂದು ಒತ್ತಾಯಿಸಿದರು.

ನಮ್ಮ ಜನರಿಗೆ ಊರಿನಲ್ಲಿ ಕೂಲಿ ಮಾಡಿ ಬದುಕುವುದೂ ಕಷ್ಟವಾಗಿದೆ. ಎಲ್ಲವೂ ಖಾಸಗೀಕರಣವಾಗುತ್ತಿದೆ. ಇದರಿಂದ ವಿದ್ಯಾರ್ಥಿಗಳು ಬೀದಿಗಿಳಿದು ಹೋರಾಟ ನಡೆಸುವಂತಾಗಿದೆ. ದಲಿತ ಸಂಘರ್ಷ ಸಮಿತಿ (ಡಿಎಸ್‌ಎಸ್) ಕೂಡ ಅನ್ಯಾಯದ ವಿರುದ್ಧ ಹೋರಾಟ ಮುಂದುವರಿಸಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಮಾತನಾಡಿ, ಮಾರುತಿ ಬೌದ್ಧೆ ಅವರು ಸುಮಾರು 40 ವರ್ಷಗಳಿಂದ ಅಸಮಾನತೆ, ಅಸ್ಪೃಶ್ಯತೆ ಹಾಗೂ ಜಾತೀಯತೆಯ ವಿರುದ್ಧ ಸಮಸಮಾಜ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಹೋರಾಟ ನಡೆಸುತ್ತಿದ್ದಾರೆ. ಬುದ್ಧ, ಬಸವ ಮತ್ತು ಅಂಬೇಡ್ಕರ್ ಅವರ ತತ್ವಗಳನ್ನು ಮೈಗೂಡಿಸಿಕೊಂಡು ಸಮಾಜದ ಪರವಾಗಿ ಶ್ರಮಿಸಿರುವ ಅವರನ್ನು ಸಮ್ಮೇಳನದ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿರುವುದು ಸಂತಸದ ವಿಚಾರವಾಗಿದೆ ಎಂದರು.

ಕನ್ನಡ ಸಾಹಿತ್ಯವು ಜಗತ್ತಿನ ಸಾಹಿತ್ಯಕ್ಕೆ ಅದ್ಭುತ ಕೊಡುಗೆ ನೀಡಿದೆ. ವಚನ ಸಾಹಿತ್ಯ ಮತ್ತು ದಾಸ ಸಾಹಿತ್ಯ ಸಮಾಜಕ್ಕೆ ಹಲವು ರೀತಿಯಲ್ಲಿ ಮಾರ್ಗದರ್ಶನ ಮಾಡಿವೆ. ಸಮಾಜದಲ್ಲಿ ಪರಿವರ್ತನೆಗೆ ಅನೇಕ ಕಾರಣಗಳಿದ್ದರೂ ಅತ್ಯಂತ ಮಹತ್ವದ ಕಾರಣ ಸಾಹಿತ್ಯವಾಗಿದೆ. ಸಾಹಿತ್ಯ ಇಲ್ಲದಿದ್ದರೆ ಮನುಷ್ಯ ಪಶುವಿನಂತಾಗುತ್ತಿದ್ದ. ಮನುಷ್ಯನಲ್ಲಿರುವ ಕ್ರೋಧವನ್ನು ಹೋಗಲಾಡಿಸಿ ಪ್ರೀತಿ ಬೆಳೆಸುವ ಶಕ್ತಿ ಸಾಹಿತ್ಯಕ್ಕಿದೆ. ಆದ್ದರಿಂದ ಪುಸ್ತಕ ಓದುವ ಅಭಿರುಚಿ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಾಹಿತ್ಯವು ಅಧಿಕಾರದ ಪರವಾಗಿರಬಾರದು. ಅಧಿಕಾರದಲ್ಲಿರುವವರ ಲೋಪದೋಷಗಳನ್ನು ಹೊರತರುವ ಕೆಲಸವನ್ನು ಸಾಹಿತ್ಯ ಮಾಡಬೇಕು. ಸಮಾಜದ ಕಟ್ಟಕಡೆಯ ಮನುಷ್ಯನಿಗೆ ಸಾಮಾಜಿಕ ನ್ಯಾಯ ದೊರೆತಾಗ ಮಾತ್ರ ಪ್ರಜಾಪ್ರಭುತ್ವ ಯಶಸ್ವಿಯಾಗುತ್ತದೆ. ದೇಶದ ಜನರು ಸಾಮಾಜಿಕವಾಗಿ, ಆರ್ಥಿಕವಾಗಿ ಹಾಗೂ ಶೈಕ್ಷಣಿಕವಾಗಿ ಸಬಲರಾದಾಗ ಮಾತ್ರ ಭಾರತ ಬಲಿಷ್ಠ ರಾಷ್ಟ್ರವಾಗಲು ಸಾಧ್ಯ. ಬರೀ ಭಾಷಣಗಳಿಂದ ವಿಶ್ವಗುರುವಾಗಲು ಸಾಧ್ಯವಿಲ್ಲ ಎಂದು ಹೇಳಿದರು.

ಹಿರಿಯ ಹೋರಾಟಗಾರ ಡಿ.ಜಿ. ಸಾಗರ್ ಮಾತನಾಡಿ, ದೇಶ ಇಂದು ಅಘೋಷಿತ ತುರ್ತು ಪರಿಸ್ಥಿತಿಯಂತಹ ಸನ್ನಿವೇಶವನ್ನು ಎದುರಿಸುತ್ತಿದೆ. ಈ ಸಂದರ್ಭದಲ್ಲಿ ಸಹೋದರತೆ, ಭ್ರಾತೃತ್ವ ಮತ್ತು ಸ್ವಾತಂತ್ರ್ಯ ಗಂಡಾಂತರದಲ್ಲಿವೆ. ಹೀಗಾಗಿ ದಲಿತ ಚಳವಳಿ ಮರುಹುಟ್ಟು ಪಡೆಯಬೇಕಾಗಿದೆ ಎಂದರು.

ಜಾತೀಯತೆ, ಕೋಮುವಾದ ಹಾಗೂ ಮನುವಾದ ಇಂದು ಹೆಚ್ಚೆಚ್ಚು ಬಲಿಷ್ಠವಾಗುವ ಮೂಲಕ ಮನುಷ್ಯ ಸಂಬಂಧಗಳನ್ನು ಹಾಳುಮಾಡುತ್ತಿವೆ. ಹಿಂದೂಗಳಲ್ಲದ ಇತರ ಧರ್ಮಗಳ ಜನರನ್ನು ದೇಶದ್ರೋಹಿಗಳಂತೆ ಬಿಂಬಿಸಿ, ಅವರ ಬಗ್ಗೆ ಹಿಂದೂಗಳಲ್ಲಿ ದ್ವೇಷ ಬಿತ್ತಲಾಗುತ್ತಿದೆ. ಸಾಮಾಜಿಕ ಸಾಮರಸ್ಯ ಹಾಳುಮಾಡಿ ಹಿಂಸೆಯನ್ನು ಪ್ರಚೋದಿಸಲಾಗು ತ್ತಿದೆ. ಪ್ರಜಾಪ್ರಭುತ್ವದ ಮೂಲ ಆಧಾರವಾಗಿರುವ ಚುನಾವಣಾ ವ್ಯವಸ್ಥೆಯನ್ನು ಭ್ರಷ್ಟಗೊಳಿಸಿ, ಮತಗಳನ್ನು ಕದಿಯುವ ಮೂಲಕ ಅನೈತಿಕವಾಗಿ ಅಧಿಕಾರಕ್ಕೆ ಬರಲಾಗುತ್ತಿದೆ. ಕ್ರೈಸ್ತ, ಬೌದ್ಧ, ಮುಸ್ಲಿಂ, ಹಿಂದುಳಿದ ವರ್ಗಗಳು, ಆದಿವಾಸಿಗಳು, ಅಲೆಮಾರಿಗಳು ಹಾಗೂ ಬುಡಕಟ್ಟು ಸಮುದಾಯಗಳ ಮತದಾನದ ಹಕ್ಕನ್ನು ಕಸಿದುಕೊಳ್ಳಲಾಗುತ್ತಿದೆ ಎಂದು ಆರೋಪಿಸಿದರು.

ನುಸುಳುಕೋರರನ್ನು ಪತ್ತೆಹಚ್ಚುವ ನೆಪದಲ್ಲಿ ಎಸ್‌ಐಆರ್ ಮೂಲಕ ಭಾರತದಲ್ಲಿಯೇ ಹುಟ್ಟಿ ಬೆಳೆದವರನ್ನೂ ಈ ದೇಶದವರಲ್ಲ ಎಂದು ಹೇಳಲಾಗುತ್ತಿದೆ. ಮತದಾನದ ಹಕ್ಕು ಕಳೆದುಕೊಂಡರೆ ಸಂವಿಧಾನಬದ್ಧ ಹಕ್ಕುಗಳು ಮತ್ತು ಪ್ರಜಾಪ್ರಭುತ್ವವನ್ನೇ ಕಳೆದುಕೊಂಡಂತೆ. ಆದ್ದರಿಂದ ನಾವೆಲ್ಲರೂ ಇದನ್ನು ಖಂಡಿಸಬೇಕು. ಹಿಂದುತ್ವವನ್ನು ಪ್ರತಿನಿಧಿಸುವ ಸಂಘಟನೆಗಳನ್ನು ಹಿಮ್ಮೆಟ್ಟಿಸಲು ಒಗ್ಗಟ್ಟಿನಿಂದ ಹೋರಾಟ ನಡೆಸಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಎಸ್.ಎಂ. ಜನವಾಡಕರ್ ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಸುರೇಶ್ ಚನ್ನಶೆಟ್ಟಿ ಮಾತನಾಡಿದರು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಭಂತೆ ವರಜ್ಯೋತಿ, ಶಾಸಕರಾದ ರಹೀಂ ಖಾನ್, ಡಾ. ಶೈಲೇಂದ್ರ ಬೇಲ್ದಾಳೆ, ಎಸ್.ಪಿ. ಸುಳ್ಳದ್, ಶಾಂತಾಬಾಯಿ ಕಾಂಬಳೆ, ಶಿವಯ್ಯ ಸ್ವಾಮಿ, ಸಿ.ಬಿ. ಸೋಮಶೆಟ್ಟಿ, ಕಲ್ಯಾಣರಾವ್, ದೇವಿದಾಸ್ ಚಿಮಕೋಡ್, ಶಿವಲೀಲಾ, ಗುರುನಾಥ್ ರಾಜಗೀರಾ, ಅರುಣ್ ಪಟೇಲ್, ವಿಠಲದಾಸ್ ಪ್ಯಾಗೆ, ಸರೇಶ್ ಹಾದಿಮನಿ, ಎಚ್. ಶಂಕರ್ ಬಾಬು ಟೈಗರ್ ಹಾಗೂ ಎಂ.ಎಸ್. ಮನೋಹರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



ಅಭಿವೃದ್ಧಿಗೆ ಹಣವಿಲ್ಲ ಎಂಬ ಬಿಜೆಪಿ ಆರೋಪ ಸುಳ್ಳು: ಸಚಿವ ಬಸವರಾಜ ರಾಯರೆಡ್ಡಿ

ಕಲಬುರಗಿ:

ರಾಜ್ಯ ಸರ್ಕಾರದ ಬಳಿ ಅಭಿವೃದ್ಧಿ ಕಾರ್ಯಗಳಿಗೆ ಹಣವಿಲ್ಲ ಎಂಬ ಬಿಜೆಪಿ ನಾಯಕರ ಆರೋಪಗಳು ಸಂಪೂರ್ಣ ಸುಳ್ಳು. ಗ್ಯಾರಂಟಿ ಯೋಜನೆಗಳ ಜತೆಗೆ ಶಿಕ್ಷಣ ಸೇರಿದಂತೆ ಎಲ್ಲ ಕ್ಷೇತ್ರಗಳ ಅಭಿವೃದ್ಧಿಗೂ ಅಗತ್ಯವಿರುವಷ್ಟು ಅನುದಾನ ಸರ್ಕಾರದ ಬಳಿ ಇದೆ ಎಂದು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಹೇಳಿದರು.

ಶನಿವಾರ ಆಳಂದ ಪಟ್ಟಣದ ಕಾಲೇಜು ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಸಹಯೋಗದಲ್ಲಿ 5 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಿರುವ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯಕ್ಕೆ ಅಡಿಗಲ್ಲು ನೆರವೇರಿಸಿ, ಜಂಟಿ ಕಾಲೇಜುಗಳ ನೂತನ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯದ 4.48 ಲಕ್ಷ ಕೋಟಿ ರೂ. ಬಜೆಟ್‌ನಲ್ಲಿ ಶಿಕ್ಷಣ ಕ್ಷೇತ್ರಕ್ಕೆ 55 ಸಾವಿರ ಕೋಟಿ ರೂ. (ಶೇ.11.6) ಮೀಸಲಿಡಲಾಗಿದೆ. ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಖಾಲಿ ಇರುವ 800 ಹುದ್ದೆಗಳು, ವಿಶ್ವವಿದ್ಯಾಲಯಗಳ 1,000 ಪ್ರಾಧ್ಯಾಪಕರ ಹುದ್ದೆಗಳು ಹಾಗೂ 320 ಪ್ರಾಂಶುಪಾಲರ ಹುದ್ದೆಗಳನ್ನು ಮೆರಿಟ್ ಆಧಾರದ ಮೇಲೆ ಶೀಘ್ರದಲ್ಲೇ ಭರ್ತಿ ಮಾಡಲಾಗುವುದು ಎಂದು ತಿಳಿಸಿದರು.

ಹಿಂದಿನ ಸರ್ಕಾರದ ಅವಧಿಯಲ್ಲಿ ಪ್ರಮುಖ ಅಭಿವೃದ್ಧಿ ಕಾರ್ಯಗಳು ನಡೆದಿರಲಿಲ್ಲ. ಆದರೆ, ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಕಲ್ಯಾಣ ಕರ್ನಾಟಕ ಸೇರಿದಂತೆ ರಾಜ್ಯದಾದ್ಯಂತ ಶಿಕ್ಷಣ ಸಂಸ್ಥೆಗಳು, ಪಾಲಿಟೆಕ್ನಿಕ್ ಕಾಲೇಜುಗಳು, ವಸತಿ ನಿಲಯಗಳು ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ. ಸರ್ಕಾರದ ಆರ್ಥಿಕ ಸ್ಥಿತಿಯ ಕುರಿತು ವಿರೋಧ ಪಕ್ಷಗಳು ಮಾಡುತ್ತಿರುವ ರಾಜಕೀಯ ಪ್ರೇರಿತ ಆರೋಪಗಳನ್ನು ಜನರು ನಂಬಬಾರದು ಎಂದರು.

ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲ್ ಮಾತನಾಡಿ, ಸರ್ಕಾರದ ಬದ್ಧತೆಯಿಂದ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಗೆ ಪ್ರತಿವರ್ಷ 5,000 ಕೋಟಿ ರೂ. ಅನುದಾನ ನೀಡಲಾಗುತ್ತಿದೆ. ಸಂವಿಧಾನದ 371(ಜೆ) ವಿಧಿಯ ಅನುಷ್ಠಾನದಿಂದ ಈ ಭಾಗದ ಯುವಕರಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಹೆಚ್ಚಿನ ಅವಕಾಶಗಳು ದೊರೆಯುತ್ತಿವೆ ಎಂದರು.

ಆಳಂದ ತಾಲೂಕಿನಲ್ಲಿ ಸಚಿವ ಬಸವರಾಜ ರಾಯರೆಡ್ಡಿ ಅವರ ನೇತೃತ್ವದಲ್ಲಿ ವಿವಿಧ ಕಾಲೇಜುಗಳ ನೂತನ ಕಟ್ಟಡಗಳನ್ನು ನಿರ್ಮಿಸಿ ಉದ್ಘಾಟಿಸಲಾಗಿದೆ. ಹಳೆಯ ಕಟ್ಟಡಗಳ ದುರಸ್ತಿಯ ಜತೆಗೆ ಹೊಸ ಕಟ್ಟಡಗಳ ನಿರ್ಮಾಣಕ್ಕೂ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.



ದಲಿತರು ಬಲಿತರಾದರೆ ನಿನಗೇನು ನೋವು ಕುಮಾರಣ್ಣಾ! ಘೋಷವಾಕ್ಯದೊಂದಿಗೆ ಪೋಸ್ಟರ್ ಅಭಿಯಾನ

ಕಲಬುರಗಿ:

ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅಭಿಮಾನಿ ಬಳಗದ ಸೇಡಂ ಘಟಕದ ವತಿಯಿಂದ ದಲಿತರು ಬಲಿತರಾದರೆ ನಿನಗೇನು ನೋವು ಕುಮಾರಣ್ಣಾ! ಎಂಬ ಘೋಷವಾಕ್ಯದೊಂದಿಗೆ ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಅವರ ಪುತ್ಥಳಿ ಆವರಣದಲ್ಲಿ ಪೋಸ್ಟರ್ ಅಭಿಯಾನ ನಡೆಸಲಾಯಿತು.

ದಲಿತರ ಸಬಲೀಕರಣ ಹಾಗೂ ಅವರ ಹಕ್ಕುಗಳ ವಿಚಾರವಾಗಿ ರಾಜಕೀಯ ವಲಯದಲ್ಲಿ ವ್ಯಕ್ತವಾಗುತ್ತಿರುವ ಹೇಳಿಕೆಗಳಿಗೆ ಪ್ರತಿಕ್ರಿಯೆಯಾಗಿ ಈ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಬಳಗದ ಸದಸ್ಯರು ತಿಳಿಸಿದರು.

ಈ ಸಂದರ್ಭದಲ್ಲಿ ಬಸವರಾಜ್ ಕಾಳಗಿ, ರಾಘವೇಂದ್ರ ವಾಲಿಕಾರ, ಈರಪ್ಪ ಗುಂಡಗುರ್ತಿ, ಸುರೇಶ ಚಾವ್ಹಾಣ್, ಪ್ರಶಾಂತ ಸೇಡಂಕರ್ ಅರುಣ್ ಮುಡಬೂಳಕರ್ ಶ್ರೀಕಾಂತ್ ಜಾಪನೂರ, ಜಗನ್ನಾಥ ಬೀಜನಹಳ್ಳಿಕರ್ ಮಹಾದೇವ ಉಡ್ಗಿ, ನಾಗೇಶ ಮದನಕರ, ಸುರೇಶ ಇವಣಿ, ಶ್ರೀನಿವಾಸ ಹೊಸೂರಕರ್ ಹಾಗೂ ಬಸವರಾಜ ಕಟ್ಟಿಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕನ್ನಡ ನಮ್ಮ ಅಸ್ಮಿತೆ, ಸ್ವಾಭಿಮಾನದ ಪ್ರತೀಕ: ಪ್ರವೀಣ್ ಪಾಟೀಲ್ ಹರವಾಳ



ಕಲಬುರಗಿ:

''ಎಲ್ಲಾದರೂ ಇರು, ಎಂತಾದರೂ ಇರು, ಎಂದೆಂದಿಗೂ ಕನ್ನಡಿಗ 'ನಾಗಿರು'' ಎಂಬ ಮಂಕುತಿಮ್ಮನ ಕಗ್ಗದ ಸಾಲುಗಳು ಪ್ರತಿಯೊಬ್ಬ ಕನ್ನಡಿಗನ ಹೃದಯದಲ್ಲಿ ಸದಾ ಮೊಳಗುತ್ತಿರಬೇಕು. ಕನ್ನಡ ಕೇವಲ ವ್ಯವಹಾರದ ಮಾಧ್ಯಮ ಅಥವಾ ಭಾಷೆಯಲ್ಲ; ಅದು ನಮ್ಮ ಅಸ್ಮಿತೆ ಮತ್ತು ಸ್ವಾಭಿಮಾನದ ಪ್ರತೀಕ ಎಂದು ಜೆಸ್ಕಾಂ ಅಧ್ಯಕ್ಷ ಪ್ರವೀಣ್ ಪಾಟೀಲ್ ಹರವಾಳ ಹೇಳಿದರು.

ನಗರದ ಸರ್ದಾರ್ ವಲ್ಲಭ ಭಾಯಿ ಪಟೇಲ್ ವೃತ್ತದಲ್ಲಿರುವ ಕನ್ನಡ ಭವನದ ಸುವರ್ಣ ಸಭಾಂಗಣದಲ್ಲಿ ರವಿವಾರ ಶ್ರೀದೇವಿ ಸಂಗೀ ತ ಸಾಹಿತ್ಯ ಸಾಂಸ್ಕೃತಿಕ ಛಾಯಾಚಿತ್ರ ಕಲಾ ಸಂಸ್ಥೆಯ ವತಿಯಿಂದ 71ನೇ ಕನ್ನಡ ರಾಜ್ಯೋತ್ಸವದ ಅಂಗವಾಗಿ ಆಯೋಜಿಸಿದ್ದ ಯುವ ಕವಿಗೋಷ್ಠಿ, ಜಾನಪದ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಯುವ ಕಾಯಕ ರತ್ನ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಸುಮಾರು ಎರಡು ಸಾವಿರ ವರ್ಷಗಳಿಗೂ ಅಧಿಕ ಇತಿಹಾಸ ಹೊಂದಿರುವ ಕನ್ನಡ ಭಾಷೆಯು ಸಮೃದ್ಧ ಸಾಹಿತ್ಯ, ಸಂಸ್ಕೃತಿ ಮತ್ತು ಪರಂಪರೆಯನ್ನು ಒಳಗೊಂಡಿದೆ. ಅನೇಕ ಹೋರಾಟಗಾರರ ತ್ಯಾಗ ಮತ್ತು ಪರಿಶ್ರಮದ ಫಲವಾಗಿ 1973ರಲ್ಲಿ ಮೈಸೂರು ರಾಜ್ಯಕ್ಕೆ ಅಧಿಕೃತವಾಗಿ ಕರ್ನಾಟಕ ಎಂದು ಮರುನಾಮಕರಣ ಮಾಡಲಾಯಿತು. ಇಂದಿನ ಕರ್ನಾಟಕದ ನಿರ್ಮಾಣಕ್ಕೆ ಶ್ರಮಿಸಿದ ಎಲ್ಲ ಮಹನೀಯರ ಕೊಡುಗೆಯನ್ನು ಸ್ಮರಿಸಬೇಕು ಎಂದರು.

ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಉದ್ಯೋಗ ಹಾಗೂ ಜಾಗತಿಕ ಜ್ಞಾನಾರ್ಜನೆಗೆ ಇಂಗ್ಲಿಷ್ ಕಲಿಕೆ ಅನಿವಾರ್ಯ ಎಂಬುದನ್ನು ಅಲ್ಲಗಳೆಯಲಾಗದು. ಆದರೆ, ಆಧುನಿಕತೆಯ ಭರದಲ್ಲಿ ನಮ್ಮ ಮಾತೃಭಾಷೆಯನ್ನು ಮರೆಯ ಬಾರದು. ಕನ್ನಡ ಮತ್ತು ಇಂಗ್ಲಿಷ್ ಭಾಷೆಗಳ ನಡುವೆ ಸಮತೋಲನ ಕಾಯ್ದುಕೊಳ್ಳುವ ಮೂಲಕ ಕನ್ನಡ ಭಾಷೆಯನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಪ್ರಾಥಮಿಕ ಕರ್ತವ್ಯ ವಾಗಿದೆ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿಜಯಕುಮಾರ ಪಾಟೀಲ್ ತೆಗಲತಿಪ್ಪಿ, ಕನ್ನಡ ನಾಡು ಇಂದಿಗೂ ಸುಸಂಸ್ಕೃತವಾಗಿ ಬೆಳೆಯಲು ಇಲ್ಲಿನ ಲೇಖಕರು, ಕವಿಗಳು ಹಾಗೂ ಸಾಹಿತಿಗಳ ಕೊಡುಗೆ ಅಪಾರವಾಗಿದೆ. ಅವರ ಬರಹಗಳು ಮತ್ತು ಆದರ್ಶಗಳನ್ನು ಇಂದಿನ ಯುವಪೀಳಿಗೆ ಹಾಗೂ ಜನಸಾಮಾನ್ಯರಿಗೆ ತಲುಪಿಸುವ ಅಗತ್ಯವಿದೆ. ಕನ್ನಡದ ಹಿರಿಮೆಯನ್ನು ಸಾರುವ ಕವಿಗಳು ಮತ್ತು ನಾಡಿಗಾಗಿ ನಿರಂತರವಾಗಿ ಶ್ರಮಿಸುತ್ತಿರುವ ನಿಸ್ವಾರ್ಥ ವ್ಯಕ್ತಿಗಳನ್ನು ಸ್ಮರಿಸುವುದು ನಮ್ಮೆಲ್ಲರ ಕರ್ತವ್ಯ ಎಂದರು.

ಸಂಘದ ಕಾರ್ಯದರ್ಶಿ ಬಸವರಾಜ ತೋಟದ ಪ್ರಾಸ್ತಾವಿಕವಾಗಿ ಮಾತನಾಡಿ, ಕಲೆ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಸಂಸ್ಥೆಯು ಸಾಮಾಜಿಕ ಕಳಕಳಿ ಮತ್ತು ಜವಾಬ್ದಾರಿಯಿಂದ ಕಾರ್ಯನಿರ್ವಹಿಸುತ್ತಿರುವುದು ಶ್ಲಾಘನೀಯ. ನಾಡಿನ ಅಸ್ಮಿತೆಯನ್ನು ಎತ್ತಿಹಿಡಿಯುವುದರ ಜತೆಗೆ ಬಡ ಕಲಾವಿದರನ್ನು ಪ್ರೋತ್ಸಾಹಿಸುವ ಇಂತಹ ಕಾರ್ಯಗಳು ಸಮಾಜಕ್ಕೆ ಮಾದರಿಯಾಗಿವೆ ಎಂದರು.

ಪತ್ರಕರ್ತ ದಸ್ತಗೀರ ನದಾಫ್ ಸೇರಿದಂತೆ ಹಲವು ಕವಿಗಳು ತಮ್ಮ ಕವನಗಳನ್ನು ವಾಚಿಸಿ ಗಮನ ಸೆಳೆದರು.

71ನೇ ಕನ್ನಡ ರಾಜ್ಯೋತ್ಸವದ ಅಂಗವಾಗಿ ಯುವ ಕವಿಗೋಷ್ಠಿ ಹಾಗೂ ಜಾನಪದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಕಲಾ ಕ್ಷೇತ್ರದಲ್ಲಿ ಸಾಧನೆ ಮಾಡಿದವರಿಗೆ ಯುವ ಕಾಯಕ ರತ್ನ ಪ್ರಶಸ್ತಿ ಪ್ರದಾನ ಮಾಡಿ ಪ್ರಮಾಣಪತ್ರ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಬಾಬುರಾವ ಕೊಬಾಳ, ಅರವಿಂದ ಎಚ್. ಕಟ್ಟಿ, ಮಲ್ಲಪ್ಪ ಹೊಸಮನಿ, ಡಾ. ವೈಜನಾಥ ಸಿದ್ದಣ್ಣ ಮಮ್ಮಾಣಿ, ಮಂಜು ಶಾಸ್ತ್ರೀ, ಸಿದ್ಧಾರ್ಥ ರಂಗನೂರು, ಶರಣಪ್ಪ ಸಿಂಪಿ ಸೇರಿದಂತೆ ಹಿರಿಯ ಕಲಾವಿದರು, ಕವಿಗಳು, ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಫ್ಯೂಷನ್ ಇನ್‌ಸ್ಟಿಟ್ಯೂಟ್ ವಾರ್ಷಿಕೋತ್ಸವ: ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ



ಕಲಬುರಗಿ:

ಫ್ಯೂಷನ್ ಇನ್‌ಸ್ಟಿಟ್ಯೂಟ್ ಆಫ್ ಲರ್ನಿಂಗ್ ಸಂಸ್ಥೆಯ ವಾರ್ಷಿಕೋತ್ಸವ ಹಾಗೂ ವಿವಿಧ ವೈದ್ಯಕೀಯ ಮತ್ತು ತಾಂತ್ರಿಕ ವಿಭಾಗಗಳಲ್ಲಿ ಸಾಧನೆಗೈದ ಪ್ರತಿಭಾವಂತ ವಿದ್ಯಾರ್ಥಿಗಳ ಸನ್ಮಾನ ಸಮಾರಂಭ ಭಾನುವಾರ ನಗರದ ಹೊಸ ವೆಂಕಟಗಿರಿ ಹೋಟೆಲ್ ಸಮೀಪದ ಸಿದ್ದೇಶ್ವರ ಫಂಕ್ಷನ್ ಹಾಲ್‌ನಲ್ಲಿ ನಡೆಯಿತು.

ಯಾದಗಿರಿ ಜಿಲ್ಲೆಯ ಅಬ್ಬೆತುಮಕೂರು ವಿಶ್ವಾರಾಧ್ಯ ಸಿದ್ಧ ಸಂಸ್ಥಾನ ಮಠದ ಪೂಜ್ಯ ಶ್ರೀ ಶಿವಶೇಖರ ವಿಶ್ವಾರಾಧ್ಯ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ನಡೆದ ಕಾರ್ಯಕ್ರಮವನ್ನು ಕಲಬುರಗಿ ಗ್ರಾಮೀಣ ಕ್ಷೇತ್ರದ ಶಾಸಕ ಬಸವರಾಜ ಮತ್ತಿಮಡು ಉದ್ಘಾಟಿಸಿದರು. ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಸ್ಮರಣ ಸಂಚಿಕೆ ಹಾಗೂ ಅಧ್ಯಯನ ಸಾಮಗ್ರಿ ಪುಸ್ತಕಗಳನ್ನು ಬಿಡುಗಡೆ ಮಾಡಿದರು.

ಕಾರ್ಯಕ್ರಮದಲ್ಲಿ ಡಾ. ಮಹದೇವಪ್ಪ ನಾಗರಹಳ್ಳಿ, ಕೆಬಿಎನ್ ಕಾಲೇಜಿನ ಪ್ರಾಧ್ಯಾಪಕ ಡಾ. ಸಿದ್ದೇಶ್, ಹಿರಿಯ ತಜ್ಞೆ ಡಾ. ಶೋಭಾ ಪಾಟೀಲ, ಡಾ. ಪರಮೇಶ್ವರಿ ಬಿಜಾಪುರ, ಡಾ. ನಾಗರಾಜ ಬಿಜಾಪುರ, ಡಾ. ಬಸವರಾಜ ಪಾಟೀಲ ಗೌಡ, ನಿಜಗುಣಗೌಡ ಯಲಗೋಡ, ಕಿರಣ್ ಕಮಲಾಪುರ, ಸಂಗಣ್ಣಗೌಡ ಇನಾಮದಾರ, ಆಕಾಶ ಮತ್ತಿಮಡು, ಫ್ಯೂಷನ್ ಇನ್‌ಸ್ಟಿಟ್ಯೂಟ್ ಆಫ್ ಲರ್ನಿಂಗ್ ಸಂಸ್ಥೆಯ ಅಧ್ಯಕ್ಷೆ ಕೌಶಲ್ಯ ಎಂ.ಎಸ್. ಹಾಗೂ ನಿರ್ದೇಶಕ ಮಹೇಶಕುಮಾರ ಕೆ. ಸೂಗೂರ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

ಬಿಡಿಎಸ್ ವಿಭಾಗದಲ್ಲಿ ಚನ್ನಬಸವ, ಮೇಘಾ, ಶ್ರೀನಿಧಿ, ವೈಷ್ಣವಿ ರಾಜಪೂತ್ ಹಾಗೂ ಪ್ರಮೋದ್ ಮಹದೇವಪ್ಪ ಅವರನ್ನು ಸನ್ಮಾನಿಸಲಾಯಿತು. ಪಶುವೈದ್ಯಕೀಯ ವಿಜ್ಞಾನ ವಿಭಾಗದಲ್ಲಿ ಶ್ರೀಶೈಲ ಬಿರಾದಾರ ಅವರಿಗೆ ಗೌರವ ಸಲ್ಲಿಸಲಾಯಿತು.

ಬಿಎಎಂಎಸ್ ವಿಭಾಗದಲ್ಲಿ ಸ್ಫೂರ್ತಿ ರೆಡ್ಡಿ, ಭಾಗ್ಯಶ್ರೀ, ಸಾಕ್ಷಿ, ರೇಣುಕಾ, ಸೌಜನ್ಯ ಮಾನಳ್ಳಿ, ಅಂಜುಂ ಪಟೇಲ್, ಕಾವೇರಿ ಪಾಟೀಲ, ಶ್ರೇಯಾ ಪಾಟೀಲ, ನಿಶಾ, ಶ್ರೀಲಕ್ಷ್ಮಿ ಅಕ್ಕೋಣಿ ಹಾಗೂ ಸೃಷ್ಟಿ ಮಠ ಅವರನ್ನು ಸನ್ಮಾನಿಸಲಾಯಿತು.

ಎಂಜಿನಿಯರಿಂಗ್ ವಿಭಾಗದಲ್ಲಿ ವಿಪುಲ್ ರೆಡ್ಡಿ, ಸಮೃದ್ಧಿ, ಶ್ವೇತಾ ಪಾಟೀಲ, ಸ್ವರೂಪ ರಾಣಿ, ಭಾವನಾ ಮುಳಗೆ, ರಾಕೇಶ್ ರೆಡ್ಡಿ, ವೇದಾಂತ ನವಲ್, ಸ್ವಾತಿ, ಸ್ನೇಹಾ ಹಾಗೂ ಸೃಷ್ಟಿ ಗುತ್ತೇದಾರ ಅವರನ್ನು ಗೌರವಿಸಲಾಯಿತು.

ವೈದ್ಯಕೀಯ, ದಂತ ವೈದ್ಯಕೀಯ, ಪಶುವೈದ್ಯಕೀಯ, ಆಯುರ್ವೇದ ಹಾಗೂ ಎಂಜಿನಿಯರಿಂಗ್ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಉನ್ನತ ಶಿಕ್ಷಣದತ್ತ ಹೆಜ್ಜೆ ಇಟ್ಟಿರುವ ವಿದ್ಯಾರ್ಥಿಗಳ ಸಾಧನೆಯನ್ನು ಗುರುತಿಸಿ ಪ್ರೋತ್ಸಾಹಿಸುವುದು ಸಮಾರಂಭದ ಉದ್ದೇಶವಾಗಿತ್ತು. ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆ, ಪ್ರತಿಭೆ ಹಾಗೂ ಪರಿಶ್ರಮವನ್ನು ಗುರುತಿಸಿ, ಭವಿಷ್ಯದಲ್ಲಿ ಇನ್ನಷ್ಟು ಸಾಧನೆ ಮಾಡಲು ಪ್ರೇರಣೆ ನೀಡುವ ನಿಟ್ಟಿನಲ್ಲಿ ಸಂಸ್ಥೆಯು ವಾರ್ಷಿಕೋತ್ಸ ವ ಆಯೋಜಿಸಿತ್ತು. ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಣಾಸಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಸೀಲ್ ಮಾಡಿದ್ದ ಹೋಟೆಲ್‌ಗಳ ಪುನರಾರಂಭಕ್ಕೆ ಅವಕಾಶ: ಜಿಲ್ಲಾಧಿಕಾರಿಗೆ ಹೋಟೆಲ್ ಸಂಘ ಅಭಿನಂದನೆ



ಕಲಬುರಗಿ:

ದೀಪಾವಳಿ ಹಬ್ಬದ ಸಂದರ್ಭದಲ್ಲಿ ಹೋಟೆಲ್‌ಗಳ ಮೇಲೆ ಹಠಾತ್ ದಾಳಿ ನಡೆಸಿ ಬಂದ್ ಮಾಡಿದ್ದ ಅಧಿಕಾರಿಗಳ ಕ್ರಮಕ್ಕೆ ಹೋಟೆಲ್ ಉದ್ಯಮಿಗಳಿಂದ ತೀವ್ರ ವಿರೋಧ ವ್ಯಕ್ತವಾದ ಬೆನ್ನಲ್ಲೇ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಮಧ್ಯಪ್ರವೇಶಿಸಿ ಸಮಸ್ಯೆ ಇತ್ಯರ್ಥಪಡಿಸಿದ್ದಾರೆ. ಸೀಲ್ ಮಾಡಿದ್ದ ಹೋಟೆಲ್‌ಗಳನ್ನು ಪುನರಾರಂಭಿಸಲು ಅವಕಾಶ ಕಲ್ಪಿಸಿದ ಜಿಲ್ಲಾಧಿಕಾರಿಗಳ ಕ್ರಮಕ್ಕೆ ಜಿಲ್ಲಾ ಹೋಟೆಲ್, ವಸತಿ ಮತ್ತು ಬೇಕರಿ ಸಂಘ ಅಭಿನಂದನೆ ಸಲ್ಲಿಸಿದೆ.

ಶನಿವಾರ ದೀಪಾವಳಿಯ ಲಕ್ಷ್ಮೀ ಪೂಜೆಗೆ ಸಿದ್ಧತೆ ನಡೆಸುತ್ತಿದ್ದ ಸಂದರ್ಭದಲ್ಲಿ ರಾತ್ರಿ ಆಹಾರ ಸುರಕ್ಷತಾ ಅಧಿಕಾರಿಗಳು ಹೋಟೆಲ್‌ಗಳ ಮೇಲೆ ದಿಢೀರ್ ದಾಳಿ ನಡೆಸಿ, ಮೂರು-ನಾಲ್ಕು ಹೋಟೆಲ್‌ಗಳನ್ನು ಸೀಲ್ ಮಾಡಿದ್ದರು.

ಭಾನುವಾರ ನಗರದ ಸಾರ್ವಜನಿಕ ಉದ್ಯಾನವನದಲ್ಲಿರುವ ಯಾತ್ರಿಕ ನಿವಾಸ ಹೋಟೆಲ್‌ನ ಸಭಾಂಗಣದಲ್ಲಿ ಜಿಲ್ಲಾ ಹೋಟೆಲ್, ವಸತಿ ಮತ್ತು ಬೇಕರಿ ಸಂಘದ ತುರ್ತು ಸಭೆ ನಡೆಯಿತು. ಈ ವೇಳೆ ಸಮಸ್ಯೆಯನ್ನು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅವರ ಗಮನಕ್ಕೆ ತರಲಾಗಿತ್ತು. ಉದ್ಯಮಿಗಳ ಮನವಿಗೆ ತಕ್ಷಣ ಸ್ಪಂದಿಸಿದ ಜಿಲ್ಲಾಧಿಕಾರಿಗಳು ಹೋಟೆಲ್‌ಗಳನ್ನು ಪುನರಾರಂಭಿಸಲು ಅವಕಾಶ ಕಲ್ಪಿಸಿದ್ದಾರೆ. ಇದರಿಂದ ಹಬ್ಬದ ಪೂಜೆ ಹಾಗೂ ವ್ಯಾಪಾರ ಮುಂದುವರಿಸಲು ಅನುಕೂಲವಾಗಿದೆ ಎಂದು ಸಂಘದ ಪದಾಧಿಕಾರಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೋಟೆಲ್‌ಗಳ ವ್ಯವಹಾರದಲ್ಲಿ ಲೋಪದೋಷಗಳಿದ್ದರೆ ಕಾನೂನುಬದ್ಧ ಕ್ರಮ ಕೈಗೊಳ್ಳಬೇಕು. ಆದರೆ, ಯಾವುದೇ ಮುನ್ನೆಚ್ಚರಿಕೆ ಅಥವಾ ಸೂಕ್ತ ಅವಕಾಶ ನೀಡದೆ ಹಬ್ಬದ ಸಂದರ್ಭದಲ್ಲಿ ಉದ್ಯಮಿಗಳಿಗೆ ತೊಂದರೆ ನೀಡುವುದು ಸರಿಯಲ್ಲ. ಸ್ವಚ್ಛತೆ ಹಾಗೂ ಆಹಾರ ಸುರಕ್ಷತಾ ನಿಯಮಗಳ ಕುರಿತು ಉದ್ಯಮಿಗಳಿಗೆ ಜಾಗೃತಿ ಮೂಡಿಸಲು ಸಂಘ ಸಂಪೂರ್ಣ ಸಹಕಾರ ನೀಡಲಿದೆ ಎಂದು ಸಭೆಯಲ್ಲಿ ಅಭಿಪ್ರಾಯ ವ್ಯಕ್ತಪಡಿಸಲಾಯಿತು.

ಸಂಘದ ಗೌರವಾಧ್ಯಕ್ಷ ರಾಜಶೇಖರ್ ಶೆಳ್ಳಗಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಅಧ್ಯಕ್ಷ ನರಸಿಂಹ ಮಂಡನ್, ರಾಜ್ಯ ಹೋಟೆಲ್ ಸಂಘದ ಉಪಾಧ್ಯಕ್ಷ ಸತ್ಯನಾಥ ಶೆಟ್ಟಿ ಸೇರಿದಂತೆ ಆರ್.ಪಿ. ರೆಡ್ಡಿ, ವೆಂಕಟೇಶ್ ಎಂ. ಕಡೇಚೂರ್, ಡಾ. ಸದಾನಂದ ಪೆರ್ಲ, ಶಿವರಾಜ್ ಕೋಟ್ಯಾನ್, ಮಹಾಕೀರ್ತಿ ಶೆಟ್ಟಿ, ವಿಷ್ಣುಮೂರ್ತಿ ಚಾತ್ರ, ಗಂಗಾಧರ ತಂತ್ರಿ, ಪ್ರಶಾಂತ ಶೆಟ್ಟಿ, ಮಾಲಾ ಕಣ್ಣಿ, ಶರಣು ಪಾಟೀಲ್, ಭರತ್, ಅಶೋಕ್ ವೆಂಕಟಗಿರಿ, ಜೀವನ್ ಕುಮಾರ್ ಜತ್ತನ್, ಸಂತೋಷ್ ಪೂಜಾರಿ, ಗಿರಿಧರ್ ಭಟ್, ರಾಮಚಂದ್ರ ನಾಯಕ್ ಹಾಗೂ ಅವಿನಾಶ್ ಹರಕೂಡೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಸಿದ್ದರಾಮಯ್ಯ ಹಾಗೂ ನನ್ನ ನಡುವೆ ಯಾವುದೇ ಮುನಿಸಿಲ್ಲ: ಸಿಎಂ ಡಿಕೆಶಿ

ಪ್ರತಿಯೊಂದು ಕೆಲಸಕ್ಕೂ ವಿರೋಧ. ನಮ್ಮ ಸರ್ಕಾರದ ಅಭಿವೃದ್ಧಿಯ ವೇಗವನ್ನು ಅವರಿಂದ ಸಹಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ನಮ್ಮ ಅಭಿವೃದ್ಧಿಯ ವೇಗವನ್ನು ಅವರು ಅರಗಿಸಿಕೊಳ್ಳಲಾಗುತ್ತಿಲ್ಲ ಎಂದು ಟೀಕಿಸಿದರು.

ಈಗಾಗಲೇ ನಿರ್ಮಾಣವಾಗಿರುವ ಎಲಿವೇಟೆಡ್ ಕಾರಿಡಾರ್‌ಗೆ ಹೊಸ ಯೋಜನೆ ಜೋಡಿಸಲಾಗುತ್ತದೆಯೇ ಅಥವಾ ಪ್ರತ್ಯೇಕವಾಗಿ ನಿರ್ಮಿಸಲಾಗುತ್ತದೆಯೇ ಎಂಬ ಪ್ರಶ್ನೆಗೆ ಉತ್ತರಿಸಿ, ಇದು ಪ್ರತ್ಯೇಕ ಯೋಜನೆಯಾಗಿರುತ್ತದೆ. ಎರಡೂ ಯೋಜನೆಗಳು ತಮ್ಮದೇ ಆದ ರೀತಿಯಲ್ಲಿ ಕಾರ್ಯನಿರ್ವಹಿಸಲಿವೆ. ಸಂಚಾರದ ವೇಗ ಮತ್ತು ಸುಗಮ ಸಂಚಾರವನ್ನು ಕಾಪಾಡುವ ಉದ್ದೇಶದಿಂದ ಪ್ರತ್ಯೇಕ ವ್ಯವಸ್ಥೆ ರೂಪಿಸಲಾಗುತ್ತಿದೆ ಎಂದರು.

ಎಲಿವೇಟೆಡ್ ಕಾರಿಡಾರ್ ಮುಂದಿನ ಭಾಗದಿಂದ ಸುರಂಗ ಮಾರ್ಗಕ್ಕೆ ಸಂಪರ್ಕ ಕಲ್ಪಿಸುವ ವ್ಯವಸ್ಥೆ ಇರಲಿದೆಯೇ ಎಂಬ ಪ್ರಶ್ನೆಗೆ, ಸುರಂಗ ಮಾರ್ಗದಿಂದ ಹೊರಬಂದು ಎಲಿವೇಟೆಡ್ ರಸ್ತೆಯ ಮೂಲಕ ಮುಂದುವರೆಯುವ ವ್ಯವಸ್ಥೆ ಇರಲಿದೆ. ಆದರೆ, ಇದು 16 ಕಿಲೋಮೀಟರ್ ಉದ್ದದ ಸುರಂಗ ಮಾರ್ಗವಲ್ಲ. ಅದು ಪ್ರತ್ಯೇಕ ಯೋಜನೆ. ಈಗ ಪ್ರಸ್ತಾಪಿಸಿರುವುದು ಸಣ್ಣ ಸುರಂಗ ಮಾರ್ಗವಾಗಿದೆ. ಹೆಬ್ಬಾಳದ ಭಾಗದಲ್ಲಿ ಉಂಟಾಗುವ ಸಂಚಾರ ದಟ್ಟಣೆಯನ್ನು ಗಮನದಲ್ಲಿಟ್ಟುಕೊಂಡು ಈ ಸಣ್ಣ ಸುರಂಗ ಮಾರ್ಗದ ಯೋಜನೆ ರೂಪಿಸಲಾಗುತ್ತಿದೆ. ಒಂದು ಪ್ರದೇಶದಲ್ಲಿ ಸಂಚಾರ ಸುಗಮಗೊಳಿಸಿದ ಬಳಿಕ ಮುಂದಿನ ಭಾಗದಲ್ಲಿ ಮತ್ತೆ ವಾಹನ ದಟ್ಟಣೆ ಉಂಟಾಗಬಾರದು ಎಂಬ ಉದ್ದೇಶದಿಂದ ಪರ್ಯಾಯ ಸಂಪರ್ಕ ವ್ಯವಸ್ಥೆ ಕಲ್ಪಿಸಲಾಗುತ್ತಿದೆ ಎಂದು ಹೇಳಿದರು.

ಸಿಎಂ ಡಿ.ಕೆ.ಶಿವಕುಮಾರ್ ಅವರು ಸೋಮವಾರ ಬೆಳಗ್ಗೆ ಮಾಜಿ ಸಿಎಂ ಸಿದ್ದರಾಮಯ್ಯರನ್ನು ಬೆಂಗಳೂರಿನ ಕಾವೇರಿ ನಿವಾಸದಲ್ಲಿ ಭೇಟಿಯಾಗಿ ದೀಪಾವಳಿ ಹಬ್ಬದ ಶುಭಾಶಯ ಕೋರಿದರು. ಈ ವೇಳೆ ರಾಜಕೀಯ ಕಾರ್ಯದರ್ಶಿ ಎ.ಎಸ್.ಪೊನ್ನಣ್ಣ ಇದ್ದರು.

ಪ್ರಿಯಕರನ ಜೊತೆ ಸೇರಿ ಮಗನನ್ನೇ ಕೊಂದ ತಾಯಿ; ಬೆಳಗಾವಿ ಪೊಲೀಸರಿಂದ 7 ಆರೋಪಿಗಳ ಬಂಧನ

ವಿರೋಧ ವ್ಯಕ್ತಪಡಿಸುತ್ತಿದ್ದ. ಇದೇ ವಿಚಾರವಾಗಿ ತಾಯಿ ಮತ್ತು ಮಗನ ನಡುವೆ ಆಗಾಗ ಜಗಳ ನಡೆಯುತ್ತಿತ್ತು ಎನ್ನಲಾಗಿದೆ. ತಮ್ಮ ಸಂಬಂಧಕ್ಕೆ ಮಗ ಅಡ್ಡಿಯಾಗುತ್ತಿದ್ದಾನೆ ಎಂದು ಭಾವಿಸಿದ ಮೀನಾ, ಆತನನ್ನು ಕೊಲೆ ಮಾಡಲು ಸಂಚು ರೂಪಿಸಿದ್ದರು ಎನ್ನಲಾಗಿದೆ.

ಬೆಳಗಾವಿಗೆ ಕರೆತಂದು ಹತ್ಯೆ

ಊರಿಗೆ ಹೋಗೋಣ ಎಂದು ಮಗನನ್ನು ನಂಬಿಸಿ ಮೀನಾ ಬೆಳಗಾವಿಗೆ ಕರೆತಂದಿದ್ದರು. ರಾಜ್ಯೋತ್ಸವದ ದಿನವಾದ ನವೆಂಬರ್ 1ರಂದು ಕೊಲೆ ಮಾಡಲು ಯೋಜನೆ ರೂಪಿಸಲಾಗಿತ್ತು. ಅದರಂತೆ ವಿಜಯನಿಗೆ ತಂಪು ಪಾನೀಯದಲ್ಲಿ ನಿದ್ದೆ ಗುಳಿಗೆ ಬೆರೆಸಿ ಕುಡಿಸಲಾಗಿತ್ತು. ಗಾಢ ನಿದ್ದೆಗೆ ಜಾರಿದ ವಿಜಯನ ಕುತ್ತಿಗೆಗೆ ಶಾಲು ಬಿಗಿದು ರಾಕೇಶ್ ಕೊಲೆ ಮಾಡಿದ್ದಾನೆ. ಇದಕ್ಕೆ ಇತರ 5 ಸ್ನೇಹಿತರು ಸಹಕರಿಸಿದ್ದಾರೆ ಎಂದು ಪೊಲೀಸ್ ಆಯುಕ್ತರು ತಿಳಿಸಿದ್ದಾರೆ.

ಹೆದ್ದಾರಿ ಪಕ್ಕ ಮೃತದೇಹ ಎಸೆದು ಪರಾರಿ

ಕೊಲೆ ಮಾಡಿದ ಬಳಿಕ ಆರೋಪಿಗಳು ವಿಜಯನ ಮೃತದೇಹವನ್ನು ನಗರದ ಹೊರವಲಯದಲ್ಲಿರುವ ಆಸ್ಪತ್ರೆಯ ಆಚೆಗೆ ರಾಷ್ಟ್ರೀಯ ಹೆದ್ದಾರಿ ಪಕ್ಕದಲ್ಲಿ ಎಸೆದು ಪರಾರಿಯಾಗಿದ್ದರು. ಅಪರಿಚಿತ ಶವವೆಂಬಂತೆ ಬಿಂಬಿಸಲು ಹಾಗೂ ಪೊಲೀಸರಿಗೆ ಸುಳಿವು ಸಿಗದಂತೆ ಸಾಕ್ಷ್ಯ ನಾಶಪಡಿಸಲು ಯತ್ನಿಸಿದ್ದರು ಎನ್ನಲಾಗಿದೆ.

ಯುವಕನ ಕುತ್ತಿಗೆಯ ಮೇಲೆ ಶಾಲಿನಿಂದ ಬಿಗಿದ ಗುರುತುಗಳನ್ನು ಗಮನಿಸಿದ ಪೊಲೀಸರು ಕೊಲೆ ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದರು. ಮೊಬೈಲ್ ದಾಖಲೆಗಳು ಹಾಗೂ ಇತರ ಸಾಕ್ಷ್ಯಗಳ ಆಧಾರದಲ್ಲಿ ಆರೋಪಿಗಳನ್ನು ಪತ್ತೆಹಚ್ಚಿ ಬಂಧಿಸುವಲ್ಲಿ ಮಾಳಮಾರುತಿ ಠಾಣೆ ಪೊಲೀಸರು ಯಶಸ್ವಿಯಾಗಿದ್ದಾರೆ.

ಬಂಧಿತ 7 ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದ್ದು, ಪ್ರಕರಣದ ಕುರಿತು ಹೆಚ್ಚಿನ ತನಿಖೆ ಮುಂದುವರಿದಿದೆ.

ಭೋವಿ ಅಭಿವೃದ್ಧಿ ನಿಗಮದ ಭೂ ಒಡೆತನ ಯೋಜನೆಯಲ್ಲಿ ₹19 ಕೋಟಿ ಅವ್ಯವಹಾರ ಆರೋಪ: ಸಿಬಿಐ ತನಿಖೆಗೆ ಒತ್ತಾಯ

ಅವರಿಗೆ ವಾಸ್ತವಿಕವಾಗಿ ಭೂಮಿಯ ಸ್ವಾಧೀನ ನೀಡಿಲ್ಲ ಎಂದು ಆಕ್ಷೇಪಿಸಿದರು.

ಈ ಪ್ರಕರಣವನ್ನು ಉನ್ನತ ಮಟ್ಟದ ನಿಷ್ಪಕ್ಷಪಾತ ತನಿಖೆಗೆ ಒಳಪಡಿಸಬೇಕು. ಅಗತ್ಯವಿದ್ದಲ್ಲಿ ಸಿಬಿಐ ತನಿಖೆಗೆ ಶಿಫಾರಸು ಮಾಡಬೇಕು. ಆರೋಪ ಎದುರಿಸುತ್ತಿರುವ ನಿಗಮದ ಜಿಲ್ಲಾ ವ್ಯವಸ್ಥಾಪಕ ರವಿ ಎಂ. ಅವರನ್ನು ಅಮಾನತುಗೊಳಿಸಿ, ಭೂ ಖರೀದಿ ಹಾಗೂ ಸಾಲ ಮಂಜೂರಾತಿಗೆ ಸಂಬಂಧಿಸಿದ ಎಲ್ಲ ದಾಖಲೆಗಳನ್ನು ವಶಕ್ಕೆ ಪಡೆದು ಪರಿಶೀಲಿಸಬೇಕು ಎಂದು ಒತ್ತಾಯಿಸಿದರು.

ಅವ್ಯವಹಾರ ಸಾಬೀತಾದಲ್ಲಿ ತಪ್ಪಿತಸ್ಥರಿಂದ ದುರುಪಯೋಗವಾದ ಹಣವನ್ನು ವಸೂಲಿ ಮಾಡಬೇಕು. ಸಂಕಷ್ಟಕ್ಕೆ ಸಿಲುಕಿರುವ ಫಲಾನುಭವಿಗಳಿಗೆ ನೀರಾವರಿ, ವಿದ್ಯುತ್ ಹಾಗೂ ರಸ್ತೆ ಸಂಪರ್ಕ ಹೊಂದಿರುವ ಫಲವತ್ತಾದ ಕೃಷಿ ಜಮೀನು ಒದಗಿಸುವ ಮೂಲಕ ನ್ಯಾಯ ದೊರಕಿಸಿಕೊಡಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸಮಾಜದ ರಾಜ್ಯಾಧ್ಯಕ್ಷ ವಿ.ಎಸ್. ಯಲ್ಲಪ್ಪ, ರಾಜ್ಯ ಪ್ರಧಾನ ಕಾರ್ಯದರ್ಶಿ ದೇವೇಂದ್ರ ಬಿಚ್ಚಾಲಿ, ತಾಲೂಕು ಅಧ್ಯಕ್ಷ ಮಲ್ಲೇಶ್ ಚಂದ್ರಬಂಡಾ, ಪ್ರಧಾನ ಕಾರ್ಯದರ್ಶಿ ಡಬ್ಲ್ಯೂ. ಈರೇಶ ಗಾಣಧಾಳ, ರಾಜ್ಯ ಸಮಿತಿ ಸದಸ್ಯ ವಿ. ಗೋವಿಂದು ಸೇರಿದಂತೆ ಸಮಾಜದ ಇತರ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ ರಾಮಣ್ಣ ಹವಳೆ ಅವರಿಗೆ ಸಾಹಿತ್ಯಾಭಿಮಾನಿಗಳಿಂದ ಗೌರವ ಸಮರ್ಪಣೆ

ಯುವ ಪ್ರತಿಭೆಗಳಿಗೆ ದಾರಿದೀಪವಾಗಬೇಕು. ಈ ಹಿನ್ನೆಲೆಯಲ್ಲಿ ರಾಮಣ್ಣ ಹವಳೆ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ 12ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಯಶಸ್ವಿಯಾಗಿ ಮೂಡಿಬರಲಿ ಎಂದು ಆಶಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾನ್ವಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು, ನಿವೃತ್ತ ಮುಖ್ಯ ಶಿಕ್ಷಕರಾದ ನಂದೀಶ್ ಬಂಡಿ, ಹನುಮಂತಪ್ಪ ಟಿ., ಯಮನಪ್ಪ, ಸಾಹಿತಿಗಳಾದ ತಾಯಪ್ಪ ಮರ್ಚಟ್ಹಾಳ್, ಮಹಾಂತೇಶ ಬಿರಾದಾರ, ದೈಹಿಕ ಶಿಕ್ಷಣ ಸಂಘದ ಅಧ್ಯಕ್ಷ ಯಂಕಪ್ಪ ಪಿರಂಗಿ, ಜಿ. ತಿಮ್ಮಾಪುರ ಶಾಲೆಯ ಮುಖ್ಯ ಶಿಕ್ಷಕ ಚಂದ್ರಪ್ಪ ಸೇರಿದಂತೆ ಶಿಕ್ಷಕರು, ಸಾಹಿತಿಗಳು ಹಾಗೂ ಸಾಹಿತ್ಯಾಭಿಮಾನಿಗಳು ಭಾಗವಹಿಸಿದ್ದರು.

ಉತ್ತಮ ಆಡಳಿತಕ್ಕೆ ಸರ್ಕಾರಿ ನೌಕರರ ಸಹಕಾರ ಅತ್ಯಗತ್ಯ: ಬಸನಗೌಡ

ಕನ್ನಡ ರಾಜ್ಯೋತ್ಸವ ಆಚರಣೆ, ಮಹಿಳಾ ಘಟಕದ ಪದಗ್ರಹಣ, ವಿವಿಧ ವೃಂದಗಳ ಪದಾಧಿಕಾರಿಗಳಿಗೆ ಸನ್ಮಾನ ಸಮಾರಂಭ

ದೌರ್ಬಲ್ಯವಾಗಬಾರದು. ಕನ್ನಡ ಭಾಷೆ ಸ್ವಾಭಿಮಾನದ ಭಾಷೆಯಾಗಬೇಕು. ಕನ್ನಡವು ಅನೇಕ ಭಾಷಿಕರಿಗೆ ಆಶ್ರಯ ಹಾಗೂ ಬದುಕನ್ನು ನೀಡಿದೆ. ಕನ್ನಡಿಗರು ತಮ್ಮ ಭಾಷೆಯ ಬಗ್ಗೆ ಹೆಮ್ಮೆ ಹೊಂದಿರಬೇಕು ಎಂದು ಹೇಳಿದರು.

ಸಮಾಜದಲ್ಲಿ ಪ್ರತಿಯೊಬ್ಬರ ಮೇಲೂ ಜವಾಬ್ದಾರಿಯಿದೆ. ಪ್ರೀತಿ ಮತ್ತು ವಿಶ್ವಾಸದಿಂದ ಕಾರ್ಯನಿರ್ವಹಿಸಬೇಕು. ಕಷ್ಟದಲ್ಲಿರುವ ವ್ಯಕ್ತಿಗಳ ನೆರವಿಗೆ ಎಲ್ಲರೂ ಮುಂದಾಗಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಹಾಗೂ ವಿಭಾಗೀಯ ಉಪಾಧ್ಯಕ್ಷ ಚಂದ್ರಶೇಖರ ಹಿರೇಮಠ ಮಾತನಾಡಿ, ಸರ್ಕಾರಿ ನೌಕರರ ಬೇಡಿಕೆಗಳ ಕುರಿತು ಈಗಾಗಲೇ ಹಲವು ಬಾರಿ ಸರ್ಕಾರದ ಗಮನಕ್ಕೆ ತರಲಾಗಿದೆ. ಶಾಸಕರು ಈ ವಿಚಾರದಲ್ಲಿ ಸರ್ಕಾರದ ಗಮನ ಸೆಳೆಯಬೇಕು. ನೌಕರರ ಭವನ ನಿರ್ಮಾಣಕ್ಕೆ ಸರ್ಕಾರದಿಂದ ಹೆಚ್ಚಿನ ಅನುದಾನ ಒದಗಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ನೇತ್ರತಜ್ಞ ಡಾ. ಚೆನ್ನನಗೌಡ ಪಾಟೀಲ್, ಕ್ಷೇತ್ರ ಶಿಕ್ಷಣಾಧಿಕಾರಿ ಕೆ. ಚಾಗಪ್ಪ, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ರುದ್ರಗೌಡ ಮಾಲಿ ಪಾಟೀಲ್, ತಾಲೂಕು ಖಜಾನೆ ಇಲಾಖೆಯ ನಾಗರಾಜ ನಾಯಕ್, ತೋಟಗಾರಿಕೆ ಇಲಾಖೆಯ ಚಂದ್ರಶೇಖರ ಕುರಿ, ಸರ್ಕಾರಿ ನೌಕರರ ಸಂಘದ ಗೌರವಾಧ್ಯಕ್ಷ ಪರಸಪ್ಪ, ಪ್ರಧಾನ ಕಾರ್ಯದರ್ಶಿ ಆನಂದಮೋಹನ್, ಹಿರಿಯ ಉಪಾಧ್ಯಕ್ಷ ಶಿವಕುಮಾರ, ರಾಜ್ಯ ಪರಿಷತ್ ಸದಸ್ಯ ದೊಡ್ಡನಿಂಗಪ್ಪ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಂಘದ ಪದಾಧಿಕಾರಿಗಳು ಹಾಗೂ ಸರ್ಕಾರಿ ನೌಕರರು ಉಪಸ್ಥಿತರಿದ್ದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಸ್ಥಳೀಯ ಉದ್ಯೋಗಾವಕಾಶ ಸೃಷ್ಟಿಗೆ ಆದ್ಯತೆ ನೀಡಬೇಕು



ಕಲಬುರಗಿ:

ಕಲ್ಯಾಣ ಕರ್ನಾಟಕ ಭಾಗದ ಯುವ ಜನರಿಗೆ ಸ್ಥಳೀಯವಾಗಿಯೇ ಉದ್ಯೋಗಾವಕಾಶ ಕಲ್ಪಿಸುವ ಮೂಲಕ ಅವರ ಭವಿಷ್ಯಕ್ಕೆ ಭದ್ರ ಬುನಾದಿ ಹಾಕಬೇಕು. ಉದ್ಯೋಗ ಮೇಳಗಳು ಉದ್ಯೋಗಾಕಾಂಕ್ಷಿಗಳು ಮತ್ತು ಉದ್ಯೋಗದಾತರ ನಡುವಿನ ಸಂಪರ್ಕ ಸೇತುವೆಗಳಾಗಿವೆ ಎಂದು ಅನನ್ಯ ಪದವಿ ಮಹಾವಿದ್ಯಾಲಯದ ಸಂಸ್ಥಾಪಕ ಶರಣು ಬಿ. ಹೊನ್ನಗಜ್ಜಿ (ಪೂಜಾರಿ) ಹೇಳಿದರು.

ನಗರದ ಹಳೆಯ ಜೇವರ್ಗಿ ರಸ್ತೆಯಲ್ಲಿರುವ ಅನನ್ಯ ಪದವಿ ಮಹಾವಿದ್ಯಾಲಯದಲ್ಲಿ ಭಾನುವಾರ ಜನಾಭಿಪ್ರಾಯ ಡಿಜಿಟಲ್ ಮಾಧ್ಯಮ ಹಾಗೂ ಕರ್ನಾಟಕ ಟೀಚರ್ಸ್ ಹೆಲ್ಪ್‌ಲೈನ್ ಸಹಯೋಗದಲ್ಲಿ ಆಯೋಜಿಸಿದ್ದ ಬೃಹತ್ ಉದ್ಯೋಗ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಲ್ಯಾಣ ಕರ್ನಾಟಕದಲ್ಲಿ ವಿದ್ಯಾವಂತರ ಸಂಖ್ಯೆ ಹೆಚ್ಚುತ್ತಿದ್ದರೂ ಸ್ಥಳೀಯ ಉದ್ಯೋಗಾವಕಾಶಗಳ ಕೊರತೆಯಿಂದ ಯುವಕರು ಬೆಂಗಳೂರು ಸೇರಿದಂತೆ ದೂರದ ನಗರಗಳಿಗೆ ವಲಸೆ ಹೋಗುತ್ತಿದ್ದಾರೆ. ಪದವಿ ಶಿಕ್ಷಣದ ಜತೆಗೆ ಸಂವಹನ ಕಲೆ, ತಾಂತ್ರಿಕ ಜ್ಞಾನ ಹಾಗೂ ವೃತ್ತಿಪರ ಕೌಶಲಗಳನ್ನು ಬೆಳೆಸಿಕೊಳ್ಳುವ ಮೂಲಕ ಉದ್ಯೋಗ ಮೇಳಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಲ್ಯಾಣ ಕರ್ನಾಟಕದಲ್ಲಿ ಕೈಗಾರಿಕೆ, ಕಾರ್ಖಾನೆ ಹಾಗೂ ಖಾಸಗಿ ಉದ್ಯಮಗಳ ಸ್ಥಾಪನೆಗೆ ಆದ್ಯತೆ ನೀಡದಿರುವುದು ನಿರುದ್ಯೋಗ ಸಮಸ್ಯೆ ಹೆಚ್ಚಲು ಪ್ರಮುಖ ಕಾರಣವಾಗಿದೆ ಎಂದು ಜನಾಭಿಪ್ರಾಯ ಡಿಜಿಟಲ್ ಮಾಧ್ಯಮದ ಸಂಪಾದಕ ರಾಜೇಂದ್ರ ರಾಜವಾಳ ಹೇಳಿದರು.

ಯುವಕರು ಉದ್ಯೋಗಕ್ಕಾಗಿ ಬೇರೆ ರಾಜ್ಯಗಳಿಗೆ ವಲಸೆ ಹೋಗುವುದನ್ನು ತಪ್ಪಿಸಲು ಸ್ಥಳೀಯವಾಗಿಯೇ ಉದ್ಯೋಗ ದೊರೆಯುವ ವಾತಾವರಣ ನಿರ್ಮಿಸಬೇಕು. ಇದಕ್ಕಾಗಿ ಸರ್ಕಾರ, ಉದ್ಯಮಿಗಳು, ಶಿಕ್ಷಣ ಸಂಸ್ಥೆಗಳು ಹಾಗೂ ಸಾಮಾಜಿಕ ಸಂಘಟನೆಗಳು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು. ಉದ್ಯೋಗ ಮೇಳ ಆಯೋಜನೆಯು ಜನಾಭಿಪ್ರಾಯ ಮಾಧ್ಯಮದ ಸಾಮಾಜಿಕ ಬದ್ಧತೆಯ ಪ್ರಯತ್ನವಾಗಿದೆ ಎಂದರು.

ಕರ್ನಾಟಕ ಟೀಚರ್ಸ್ ಹೆಲ್ಪ್‌ಲೈನ್ ನಿರ್ದೇಶಕ ಪಾಂಡುರಂಗ ರಾವ್ ಮಾತನಾಡಿ, ಉತ್ತರ ಕರ್ನಾಟಕದ ನಿರುದ್ಯೋಗಿ ಯುವಕ-ಯುವತಿಯರಿಗೆ ಉದ್ಯೋಗ ಮಾಹಿತಿ ಹಾಗೂ ಮಾರ್ಗದರ್ಶನ ಒದಗಿಸುವ ಉದ್ದೇಶದಿಂದ ಕಲಬುರಗಿಯಲ್ಲಿ ನೂತನ ಉದ್ಯೋಗ ಮಾಹಿತಿ ಕೇಂದ್ರ ಆರಂಭಿಸಲಾಗಿದೆ ಎಂದರು.

ಶಾಲಾ-ಕಾಲೇಜುಗಳ ಶಿಕ್ಷಕ ಹಾಗೂ ಬೋಧಕೇತರ ಹುದ್ದೆಗಳು, ಆಕ್ಸಿಸ್, ಐಸಿಐಸಿಐ, ಕೋಟಕ್ ಮಹೀಂದ್ರಾ, ಎಚ್‌ಡಿಎಫ್‌ಸಿ ಸೇರಿದಂತೆ ವಿವಿಧ ಬ್ಯಾಂಕುಗಳು ಹಾಗೂ ಬೆಂಗಳೂರಿನ ಪ್ರತಿಷ್ಠಿತ ಕಂಪನಿಗಳಲ್ಲಿನ ಉದ್ಯೋಗಾವಕಾಶಗಳ ಕುರಿತು ಮಾಹಿತಿ ಒದಗಿಸಲಾಗುವುದು. ಕಲಬುರಗಿ, ಯಾದಗಿರಿ ಮತ್ತು ಬೀದರ್ ಜಿಲ್ಲೆಗಳ ಉದ್ಯೋಗಾಕಾಂಕ್ಷಿಗಳು ಇದರ ಪ್ರಯೋಜನ ಪಡೆಯಬಹುದು ಎಂದು ತಿಳಿಸಿದರು. ಉದ್ಯೋಗ ಮೇಳದಲ್ಲಿ ವಿವಿಧ ಶಾಲಾ-ಕಾಲೇಜುಗಳು, ಬ್ಯಾಂಕಿಂಗ್ ಸಂಸ್ಥೆಗಳು ಹಾಗೂ ಖಾಸಗಿ ಕಂಪನಿಗಳ ಪ್ರತಿನಿಧಿಗಳು ಭಾಗವಹಿಸಿದ್ದರು. ನೂರಾರು ಉದ್ಯೋಗಾಕಾಂಕ್ಷಿಗಳು ಪಾಲ್ಗೊಂಡು ಲಭ್ಯವಿರುವ ಉದ್ಯೋಗಾವಕಾಶಗಳ ಮಾಹಿತಿ ಪಡೆದುಕೊಂಡರು.

ಕಾಲೇಜಿನ ಉಪನ್ಯಾಸಕರಾದ ರಾಹುಲ್ ಶೇರಿಕರ್ ಶರಣ್ ಬಡದಾಳ, ಜಗನ್ನಾಥ ಫುಲ್ಲಾ, ಪ್ರವೀಣಕುಮಾರ ನವಲೆ ಹಾಗೂ ಅನಿಲ ನೈಕೋಡಿ ಉಪಸ್ಥಿತರಿದ್ದರು.

ಶಿಕ್ಷಕರ ಸೇವಾ ಸಮಸ್ಯೆಗಳಿಗೆ ಶೀಘ್ರ ಪರಿಹಾರ ಕಲ್ಪಿಸಲು ಶಶೀಲ್ ನಮೋಶಿ ಮನವಿ



ಕಲಬುರಗಿ:

ಪ್ರೌಢಶಾಲಾ ಶಿಕ್ಷಕರ ಬಹುದಿನಗಳ ಬೇಡಿಕೆಗಳು ಹಾಗೂ ಸೇವಾ ಸಮಸ್ಯೆಗಳಿಗೆ ಶೀಘ್ರ ಪರಿಹಾರ ಕಲ್ಪಿಸುವಂತೆ ವಿಧಾನ ಪರಿಷತ್ ಸದಸ್ಯ ಶಶೀಲ್ ಜಿ. ನಮೋಶಿ ಅವರು ಶಾಲಾ ಶಿಕ್ಷಣ ಇಲಾಖೆಯ ಕಲಬುರಗಿ ವಿಭಾಗದ ನೂತನ ಅಪರ ಆಯುಕ್ತ ಅವಿನಾಶ ಶಿಂಧೆ ಅವರಿಗೆ ಮನವಿ ಮಾಡಿದರು.

ಶನಿವಾರ ಅಪರ ಆಯುಕ್ತರ ಕಚೇರಿಯಲ್ಲಿ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳೊಂದಿಗೆ ಭೇಟಿ ನಡೆಸಿದ ಅವರು,

ಶಿಕ್ಷಕರ ಮುಂಬಡ್ತಿ, ಕೌನ್ಸೆಲಿಂಗ್, ಪಿಂಚಣಿ ಸೇರಿದಂತೆ ವಿವಿಧ ಸಮಸ್ಯೆಗಳ ಕುರಿತು ಚರ್ಚಿಸಿದರು.

ಪ್ರೌಢಶಾಲಾ ಸಹ ಶಿಕ್ಷಕರಿಗೆ ಮುಖ್ಯ ಶಿಕ್ಷಕರ ಹುದ್ದೆಗೆ ಮುಂಬಡ್ತಿ ನೀಡುವ ಕೌನ್ಸೆಲಿಂಗ್ ಅನ್ನು ಗುರುವಾರ ಅಥವಾ ಶುಕ್ರವಾರ ನಡೆಸುವುದಾಗಿ ಅಪರ ಆಯುಕ್ತರು ಭರವಸೆ ನೀಡಿದರು. ದೈಹಿಕ ಶಿಕ್ಷಣ ಶಿಕ್ಷಕರಿಗೆ ತಾಲೂಕು ದೈಹಿಕ ಶಿಕ್ಷಣಾಧಿಕಾರಿಗಳ ಹುದ್ದೆಗೆ ಮುಂಬಡ್ತಿ ನೀಡುವ ಸಂಬಂಧ ಬಾಕಿ ಇರುವ ಪ್ರಸ್ತಾವನೆಗಳನ್ನು ತಕ್ಷಣ ಸಲ್ಲಿಸುವಂತೆ ವಿಜಯನಗರ ಜಿಲ್ಲೆಯ ಉಪನಿರ್ದೇಶಕರಿಗೆ ಸೂಚಿಸಿದರು. ಜೇಷ್ಠತಾ ಪಟ್ಟಿಯನ್ನು ಶೀಘ್ರ ಪ್ರಕಟಿಸುವಂತೆಯೂ ನಿರ್ದೇಶನ ನೀಡಿದರು.

ಹೊಸ ಪಿಂಚಣಿ ವ್ಯವಸ್ಥೆಯಿಂದ ಹಳೆಯ ಪಿಂಚಣಿ ವ್ಯವಸ್ಥೆಗೆ ವರ್ಗಾಯಿಸಬೇಕಾದ 70 ಶಿಕ್ಷಕರ ಕಡತಗಳು ತಮ್ಮ ಲಾಗಿನ್‌ನಲ್ಲಿದ್ದು, ಅವುಗಳಿಗೆ ಅದೇ ದಿನ ಸಹಿ ಮಾಡುವುದಾಗಿ ತಿಳಿಸಿದರು. ಸಂಗೀತ ಮತ್ತು ನೃತ್ಯ ಶಿಕ್ಷಕರ ಮುಂಬಡ್ತಿ ಕೌನ್ಸೆಲಿಂಗ್ ದಿನಾಂಕವನ್ನೂ ಶೀಘ್ರ ನಿಗದಿಪಡಿಸುವುದಾಗಿ ಭರವಸೆ ನೀಡಿದರು.

ಇದಲ್ಲದೆ, ಕಲಬುರಗಿ ವಿಭಾಗದ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗೆ ವಿಭಾಗ ಮಟ್ಟದಲ್ಲಿ ಏಕರೂಪದ ಕಾರ್ಯಯೋಜನೆ ರೂಪಿಸಲಾಗುವುದು. ಈ ಕುರಿತು ಶಿಕ್ಷಕರ ಸಂಘದ ಪದಾಧಿಕಾರಿಗಳ ಸಭೆ ನಡೆಸುವುದಾಗಿಯೂ ಅಪರ ಆಯುಕ್ತರು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.



ಪುಸ್ತಕ ಓದುವ ಸಂಸ್ಕೃತಿ ಹೆಚ್ಚಾಗಲಿ: ಪ್ರೊ.ಎಚ್.ಟಿ.ಪೋತೆ

ಕಲಬುರಗಿ:

ಇತ್ತೀಚಿನ ದಿನಗಳಲ್ಲಿ ಪುಸ್ತಕ ಓದುಗರ ಸಂಖ್ಯೆ ಕಡಿಮೆಯಾಗುತ್ತಿದ್ದು, ಸಮಾಜದಲ್ಲಿ ಪುಸ್ತಕ ಓದುವ ಸಂಸ್ಕೃತಿ ಮತ್ತೆ ಹೆಚ್ಚಾಗಬೇಕಿದೆ ಎಂದು ನಾಡಿನ ಹಿರಿಯ ಸಾಹಿತಿ ಪ್ರೊ. ಎಚ್.ಟಿ.ಪೋತೆ ಹೇಳಿದರು.

ನಗರದ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ಕನ್ನಡ ಪ್ರಾಧ್ಯಾಪಕಿ ಡಾ. ಭಾಗ್ಯಜ್ಯೋತಿ ಅವರು ರಚಿಸಿದ ಶರಣರ ಹಾಗೂ ಸಂತರ ಸಂಕ್ಷಿಪ್ತ ಜೀವನ ಕಥನ ಕೃತಿಯನ್ನು ಬಿಡುಗಡೆ ಮಾಡಿ ಅವರು ಮಾತನಾಡಿದರು.

ಕಲ್ಯಾಣ ಕರ್ನಾಟಕವು ವಚನ ಸಾಹಿತ್ಯ, ತತ್ವಪದ ಸಾಹಿತ್ಯ, ಕನ್ನಡ ಸಾಹಿತ್ಯ ಹಾಗೂ ಸೂಫಿ ಸಾಹಿತ್ಯ ಸೇರಿದಂತೆ ಹಲವು ಸಾಹಿತ್ಯ ಪ್ರಕಾರಗಳ ಉಗಮ ಮತ್ತು ಬೆಳವಣಿಗೆಗೆ ಸಾಕ್ಷಿಯಾಗಿದೆ. ಇಂತಹ ಶ್ರೀಮಂತ ಸಾಹಿತ್ಯ ಪರಂಪರೆಯನ್ನು ಹೊಂದಿರುವ ಈ ಭಾಗದ ಪ್ರತಿಯೊಬ್ಬ ವಿದ್ಯಾರ್ಥಿ ಹಾಗೂ ಅಧ್ಯಾಪಕರು ಅಧ್ಯಯನಶೀಲ, ಚಿಂತನಶೀಲ ಮತ್ತು ಸಂಶೋಧನಾಶೀಲರಾಗಬೇಕು ಎಂದು ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕರೂ ಆದ ಪ್ರೊ. ಎಚ್.ಟಿ. ಪೋತೆ ಹೇಳಿದರು.

ಕನ್ನಡ ಪುಸ್ತಕ ಪ್ರಾಧಿಕಾರದ ಸದಸ್ಯ ಬಿ.ಎಚ್. ನಿರಗುಡಿ ಮಾತನಾಡಿ, ಸರಳ ಭಾಷೆಯಲ್ಲಿ ರಚಿಸಿರುವ ಈ ಕೃತಿಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಆಚರಿಸಲಾಗುವ ಶರಣರು ಹಾಗೂ ಸಂತರ ಜಯಂತಿಗಳ ಪರಿಚಯದ ಜೊತೆಗೆ 33 ಮಹಾನ್ ಶರಣರ ಸಂಕ್ಷಿಪ್ತ ಜೀವನ ಕಥನವನ್ನು ಉತ್ತಮವಾಗಿ ದಾಖಲಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಡಾ. ನಾರಾಯಣ ರೋಲೆಕರ ಮಾತನಾಡಿದರು. ಕಾಲೇಜಿನ ಪ್ರಾಂಶುಪಾಲ ಪ್ರೊ. ಪ್ರಕಾಶ ಮೋರಗೆ ಅಧ್ಯಕ್ಷತೆ ವಹಿಸಿದ್ದರು. ಕೃತಿಯ ಲೇಖಕಿ ಡಾ. ಭಾಗ್ಯಜ್ಯೋತಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಿದ್ರಾಮಪ್ಪ ಬಣಗಾರ ನಿರೂಪಿಸಿದರು. ಡಾ. ಪ್ರಿಯದರ್ಶಿನಿ ವಂದಿಸಿದರು.

ವೇದಿಕೆಯಲ್ಲಿ ಡಾ. ರಾಮಲಿಂಗಪ್ಪ ಭೋಸಲೆ, ಡಾ. ಪ್ರಿಯದರ್ಶಿನಿ, ಡಾ. ಜ್ಯೋತಿ ಕೆ.ಎಸ್. ಸೇರಿದಂತೆ ಇತರರು ಉಪಸ್ಥಿತರಿದ್ದರು.



ಸಾರ್ವಜನಿಕರು ಪ್ರಜಾಸೇವಾ ಜನಸಂಪರ್ಕ ಸಭೆಯ ಸದುಪಯೋಗ ಪಡೆದುಕೊಳ್ಳಿ: ತಹಶೀಲ್ದಾರ್ ಮಂಜುನಾಥ ಪಂಚಾಳ್

ಚಿಟಗುಪ್ಪ,

ಸಾರ್ವಜನಿಕರ ಅನುಕೂಲಕ್ಕಾಗಿ ಪ್ರಜಾಸೇವಾ ಜನಸಂಪರ್ಕ ಸಭೆಗಳನ್ನು ಆಯೋಜಿಸಲಾಗುತ್ತಿದ್ದು, ಜನರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಹಶೀಲ್ದಾರ್ ಮಂಜುನಾಥ ಪಂಚಾಳ್ ಹೇಳಿದರು.

ತಾಲ್ಲೂಕಿನ ಇಟಗಾ ಗ್ರಾಮ ಪಂಚಾಯಿತಿ ಆವರಣದಲ್ಲಿ ಶನಿವಾರ ನಡೆದ ಪ್ರಜಾಸೇವಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅಧಿಕಾರಿಗಳು ಖುದ್ದಾಗಿ ಗ್ರಾಮಕ್ಕೆ ಭೇಟಿ ನೀಡಿ ಜನರಿಂದ ಅರ್ಜಿಗಳನ್ನು ಸ್ವೀಕರಿಸಿ, ಅವರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವುದೇ ಪ್ರಜಾಸೇವಾ ಜನಸಂಪರ್ಕ ಸಭೆಯ ಮುಖ್ಯ ಉದ್ದೇಶವಾಗಿದೆ ಎಂದರು.

ಸರ್ಕಾರದ ಯೋಜನೆಗಳು ಹಾಗೂ ವಿವಿಧ ದಾಖಲೆಗಳನ್ನು ಪಡೆಯಲು ಜನರು ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಿ, ಅವರ ಕೆಲಸಗಳನ್ನು ತ್ವರಿತವಾಗಿ ಮಾಡಿಕೊಡುವ ಉದ್ದೇಶದಿಂದ ಮುಖ್ಯಮಂತ್ರಿಗಳು ಈ ಕಾರ್ಯಕ್ರಮವನ್ನು ರೂಪಿಸಿದ್ದಾರೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು. ಕಂದಾಯ, ಆರ್‌ಡಿಪಿಆರ್ ಅಬಕಾರಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ಒಟ್ಟು 45 ಅರ್ಜಿಗಳು ಸಲ್ಲಿಕೆಯಾಗಿವೆ. ಈ ಅರ್ಜಿಗಳನ್ನು ಶೀಘ್ರದಲ್ಲೇ ವಿಲೇವಾರಿ ಮಾಡುವಂತೆ ಆಯಾ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಇಒ ಲಿಂಗರಾಜ್ ಪಾಟೀಲ್, ಬಿಇಒ ವೆಂಕಟೇಶ್ ಗುಡಾಳ್, ಸಿಡಿಪಿಒ ಶಿವಪ್ರಕಾಶ್ ಹಿರೇಮಠ್, ಪರಿಶಿಷ್ಟ ಪಂಗಡಗಳ ಅಧಿಕಾರಿ ಶ್ರೀಶೈಲ್, ತಾಲೂಕು ಆರೋಗ್ಯಾಧಿಕಾರಿ ಶಿವಕುಮಾರ್ ಸಿದ್ದೇಶ್ವರ್, ಆಹಾರ ನಿರೀಕ್ಷಕಿ ನಮ್ರತಾ, ಅರಣ್ಯ ಅಧಿಕಾರಿ ವೀರಯ್ಯ ಸ್ವಾಮಿ, ಇಟಗಾ ಗ್ರಾಮ ಆಡಳಿತ ಅಧಿಕಾರಿ ವಿಠ್ಠಲ್ ಸೇಡಂಕರ್, ಪಿಡಿಒ ಅಶ್ವಿನಿ, ಜನಾರ್ಧನ್ ರೆಡ್ಡಿ, ಆರ್‌ಐ ಉಮೇಶ್, ವಿಎಗಳಾದ ವಿಠ್ಠಲ್, ಪುಂಡಲೀಕ್, ರಾಧಾ ಹಾಗೂ ರಾಧಿಕಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

ಸಿ.ಟಿ.ಸಿ. ಶಿಬಿರದ ಹೆಸರಿನಲ್ಲಿ ವಿದ್ಯಾರ್ಥಿನಿಯರಿಂದ ಕಟ್ಟಡಕ್ಕೆ ಬಣ್ಣ ಬಳಿಸಿದ ಆರೋಪ: ಕ್ರಮಕ್ಕೆ ಆಗ್ರಹ



ಕಲಬುರಗಿ:

ನಗರದ ಸರ್ಕಾರಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯದಲ್ಲಿ ಸಿ.ಟಿ.ಸಿ. (ಪೌರತ್ವ ತರಬೇತಿ ಶಿಬಿರ)ದ ಹೆಸರಿನಲ್ಲಿ ಬಿ.ಎಡ್. ವಿದ್ಯಾರ್ಥಿನಿಯರಿಂದ ಕಾಲೇಜು ಕಟ್ಟಡಕ್ಕೆ ಬಣ್ಣ ಬಳಿಯಿಸುವುದು, ಗ್ರಿಲ್‌ಗಳಿಗೆ ಬಣ್ಣ ಹಚ್ಚಿಸುವುದು ಹಾಗೂ ಸುಂದರೀಕರಣದ ಕೆಲಸ ಮಾಡಿಸಿರುವುದನ್ನು ಖಂಡಿಸಿರುವ ಕಲ್ಯಾಣ ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷ ಸಂದೀಪ ಪಿ. ಭರಣಿ, ಸಂಬಂಧಪಟ್ಟ ಪ್ರಾಂಶುಪಾಲರು ಹಾಗೂ ಶಿಕ್ಷಕರನ್ನು ಅಮಾನತುಗೊಳಿಸುವಂತೆ ಆಗ್ರಹಿಸಿದ್ದಾರೆ.

ಈ ಕುರಿತು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಅವರಿಗೆ ಸಲ್ಲಿಸಿರುವ ದೂರಿನಲ್ಲಿ, ಸಿ.ಟಿ.ಸಿ. ಶಿಬಿರವು ವಿದ್ಯಾರ್ಥಿಗಳಲ್ಲಿ ನಾಗರಿಕ ಪ್ರಜ್ಞೆ, ಸಾಮಾಜಿಕತೆ, ನಾಯಕತ್ವ ಗುಣ, ತಂಡದ ಕೆಲಸ ಹಾಗೂ ಸಮುದಾಯ ಜೀವನದ ಅರಿವು ಮೂಡಿಸುವ ಉದ್ದೇಶ ಹೊಂದಿದೆ. ಆದರೆ, ಶಿಬಿರದ ಹೆಸರಿನಲ್ಲಿ ವಿದ್ಯಾರ್ಥಿನಿಯರಿಂದ ಕಾಲೇಜು ಕಟ್ಟಡದ ಗೋಡೆಗಳಿಗೆ ಬಣ್ಣ ಬಳಿಯಿಸುವುದು, ಗ್ರಿಲ್‌ಗಳಿಗೆ ಬಣ್ಣ ಹಚ್ಚಿಸುವುದು ಹಾಗೂ ಕಟ್ಟಡದ ಸುಂದರೀಕರಣದ ಕೆಲಸ ಮಾಡಿಸಿರುವುದು ನಿಯಮಬಾಹಿರವಾಗಿದೆ ಎಂದು ಆರೋಪಿಸಿದ್ದಾರೆ.

ಶಿಬಿರಕ್ಕೆ ಅನುಮತಿ ಪಡೆದಿರುವ ಕುರಿತು ವಿಚಾರಿಸಿದಾಗ, ಯಾವುದೇ ಅನುಮತಿ ಪಡೆದಿಲ್ಲ ಎಂದು ಕಾಲೇಜಿನವರು ತಿಳಿಸಿದ್ದಾರೆ. ಕಟ್ಟಡ ಹಳೆಯದಾಗಿದ್ದು, ಅದರ ಸುಂದರೀಕರಣಕ್ಕಾಗಿ ಜಿಲ್ಲಾಡಳಿತಕ್ಕೆ ಹಲವು ಬಾರಿ ಮನವಿ ಸಲ್ಲಿಸಿದರೂ ಅನುದಾನದ ಕೊರತೆಯಿಂದ ಕ್ರಮ ಕೈಗೊಂಡಿಲ್ಲ. ದಾನಿಗಳು ಬಣ್ಣ ನೀಡಿರುವುದರಿಂದ ತಾವೇ ಬಣ್ಣ ಬಳಿಯಿಂಸುತ್ತಿರುವುದಾಗಿ ಕಾಲೇಜಿನವರು ಹೇಳಿರುವುದಾಗಿ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ಈ ಕುರಿತು ಪ್ರಶ್ನಿಸಲು ತೆರಳಿದ ವೇದಿಕೆಯ ಮುಖಂಡರೊಂದಿಗೆ ಪ್ರಾಂಶುಪಾಲರು ಹಾಗೂ ಶಿಕ್ಷಕರು ವಾದವಿವಾದಕ್ಕೆ ಇಳಿದಿದ್ದು, ವಿದ್ಯಾರ್ಥಿನಿಯರನ್ನು ಮುಂದಿಟ್ಟುಕೊಂಡು ಪರಿಸ್ಥಿತಿ ವಿಕೋಪಕ್ಕೆ ತಿರುಗುವಂತೆ ಮಾಡಿದ್ದಾರೆ. ಅಲ್ಲದೆ, ವಿಡಿಯೊ ಚಿತ್ರೀಕರಣ ಮಾಡುತ್ತಿದ್ದವರನ್ನು ಕಾಲೇಜಿನ ಗೇಟ್ ಮುಚ್ಚಿ ಮುತ್ತಿಗೆ ಹಾಕಲು ಪ್ರಯತ್ನಿಸಲಾಗಿದೆ ಎಂದು ಆರೋಪಿಸಿದ್ದಾರೆ.

ವಿದ್ಯಾರ್ಥಿನಿಯರಿಂದ ಕಾಲೇಜು ಕಟ್ಟಡಕ್ಕೆ ಬಣ್ಣ ಬಳಿಯಿಸಿರುವುದು ನಾಚಿಕೆಗೇಡಿನ ಸಂಗತಿಯಾಗಿದೆ. ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರು ಹಾಗೂ ಶಿಕ್ಷಕರನ್ನು ಕೂಡಲೇ ಅಮಾನತುಗೊಳಿಸಿ, ಇಂತಹ ಘಟನೆಗಳು ಮರುಕಳಿಸದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

ಈ ಕುರಿತು ನವೆಂಬರ್ 3ರಂದು ಜಿಲ್ಲಾಧಿಕಾರಿಗಳು, ಗುಲಬರ್ಗಾ ವಿಶ್ವವಿದ್ಯಾಲಯದ ಕುಲಪತಿಗಳು, ಕಾಲೇಜು ಶಿಕ್ಷಣ ಇಲಾಖೆಯ ಪ್ರಾದೇಶಿಕ ಜಂಟಿ ನಿರ್ದೇಶಕರು ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರಿಗೆ ದೂರು ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಸಂದೀಪ ಪಿ. ಭರಣಿ ತಿಳಿಸಿದ್ದಾರೆ.

ನಿಮ್ಮೂರು ಸುದ್ದಿ

ಸಂಪಾದಕೀಯ



ನೋಟು ರದ್ದತಿಯ ದಶಮಾನೋತ್ಸವ

ಭಾರತದ ಚರಿತ್ರೆಯಲ್ಲಿಯೇ ಅತ್ಯಂತ ಕಟುವಾದ ಟೀಕೆ ಮತ್ತು ವೈಫಲ್ಯಕ್ಕೆ ಗುರಿಯಾದ ಪ್ರಧಾನಿ ನರೇಂದ್ರ ಮೋದಿ ಅವರ ನೋಟು ರದ್ದತಿಯ ನಿರ್ಧಾರಕ್ಕೆ ಈ 8ನೇ ತಾರೀಕಿಗೆ ಒಂದು ದಶಕವಾಗುತ್ತದೆ. ನಿರ್ಧಾರದ ಯಶಸ್ಸು ಮತ್ತು ವೈಫಲ್ಯಗಳು ವಿಭಿನ್ನ ಕಾರಣಗಳಿಂದ ಆಗುತ್ತವೆ. ಆದರೆ ಆ ನಿರ್ಧಾರವು ಬಹು ಮಂದಿಗೆ ಹಾನಿಯನ್ನು ಒದಗಿಸಿದಾಗ ಅದು ಮತ್ತೆ ಮತ್ತೆ ನೆನಪಾಗುತ್ತದೆ-ಇದರ ಉದ್ದೇಶ ದೋಷ ಕಂಡುಹುಡುಕುವುದಲ್ಲ, ಬದಲಾಗಿ ಇಂತಹ ನಿರ್ಧಾರಗಳ ಬಗ್ಗೆ ಆಡಳಿತವರ್ಗವು ಸದಾ ಎಚ್ಚರವಹಿಸುವ ಅಗತ್ಯವನ್ನು ಒತ್ತಿ ಹೇಳುವುದು.

ನವೆಂಬರ್ 8, 2016ರ ರಾತ್ರಿ 8 ಗಂಟೆಗೆ ರಾಷ್ಟ್ರವನ್ನು ಉದ್ದೇಶಿಸಿ ಮಾತನಾಡುತ್ತಾ ನರೇಂದ್ರ ಮೋದಿಯವರು ಕಾಳಧನಕ್ಕೆ ಹೊಡೆತ ಮತ್ತು ಆ ಮೂಲಕ ಭ್ರಷ್ಟಾಚಾರಕ್ಕೆ ಕಡಿವಾಣ. ಉಗ್ರಗಾಮಿಗಳಿಗೆ ಹಣ ಪೂರೈಕೆಗೆ ಕಡಿತ ಮತ್ತು ಕಳ್ಳನೋಟುಗಳ ಚಲಾವಣೆಯನ್ನು ನಿಲ್ಲಿಸುವ ಉದ್ದೇಶಗಳಿಂದ ನೋಟು ರದ್ದತಿಯನ್ನು ಮಾಡಲಾಗಿದೆ ಎಂದರು. 500 ಮತ್ತು 1,000 ರೂ. ಮುಖಬೆಲೆಯ ನೋಟುಗಳು ಆ ದಿನ ನಡುರಾತ್ರಿಯಿಂದ ಮೌಲ್ಯರಹಿತವಾದವು. ಆ ಮೂಲಕ ಒಟ್ಟು ಚಲಾವಣೆಯಲ್ಲಿರುವ ನೋಟುಗಳ (ಕರೆನ್ಸಿ ಯ) ಸುಮಾರು ಶೇ. 86 ಭಾಗ ಬೆಲೆಯನ್ನು ಕಳಕೊಂಡವು.

ಜನಸಾಮಾನ್ಯರನ್ನು ನೋಟು ರದ್ದತಿಯು ಗೊಂದಲ, ಭೀತಿ ಮತ್ತು ತೀವ್ರವಾದ ಸಂಕಷ್ಟಗಳಿಗೆ ನೂಕಿತು. ಅಗತ್ಯಕ್ಕೆಂದು ಮನೆಯಲ್ಲಿ ಇರಿಸಿಕೊಂಡ ಕರೆನ್ಸಿ ಗಳ ಬದಲಾವಣೆಗೆ ಬ್ಯಾಂಕುಗಳ ಶಾಖೆಗಳಿಗೆ ಹೋಗಬೇಕಿತ್ತು. ನಗರ ಮತ್ತು ಪಟ್ಟಣಗಳಲ್ಲಿ ಉದ್ದ ಉದ್ದದ ಕ್ಯೂಗಳಲ್ಲಿ ವೃದ್ಧರು, ಮಕ್ಕಳನ್ನು ಎತ್ತಿಕೊಂಡ ಮಹಿಳೆಯರು, ಗಂಟೆಗಟ್ಟಲೆ ಕಾದು ನಿಲ್ಲಬೇಕಾಗಿ ಬಂತು. ಭಾರತೀಯರ ಪದ್ಧತಿಯಂತೆ ಜೋಪಾನವಾಗಿ ಆಪದ್ಧನವಾಗಿ ಇರಿಸಿಕೊಂಡ ನೋಟುಗಳ ಮೌಲ್ಯ ತಮಗೆ ಸಿಗುತ್ತದೆಯೋ ಇಲ್ಲವೋ ಎಂಬ ಭೀತಿ ಅನೇಕರನ್ನು ಕಾಡಿತು. ಮದುವೆ, ಮುಂಜಿ ಮುಂತಾದ ಕೌಟುಂಬಿಕ ಕಾರ್ಯಕ್ರಮಗಳಿಗೆ ಬೇಕೆಂದು ತಂದಿರಿಸಿದ ನೋಟುಗಳು ಅಮಾನ್ಯವಾದಾಗ ಆಗುವ ಸಂಕಷ್ಟ ಅನುಭವಿಸಿದವರಿಗೇ ಗೊತ್ತು.

ನಿರ್ಧಾರವನ್ನು ಕೈಗೊಳ್ಳುವ ಪೂರ್ವಭಾವಿಯಾಗಿ ಸರಕಾರವು ಆರ್‌ಬಿಐ ಜೊತೆ ಅಗತ್ಯದ ಚರ್ಚೆ ಮಾಡದೆ, ತನ್ನ ನಿರ್ಧಾರಕ್ಕೆ ಸಹಿ ಹಾಕಲು ಆ ಸಂಸ್ಥೆಯನ್ನು ಒತ್ತಾಯಿಸಿತ್ತು. ಆ ಮೂಲಕ ಆರ್‌ಬಿಐಯ ಸ್ವಾಯತ್ತತೆಗೂ ಮಸಿ ಬಳಿಯಲಾಗಿತ್ತು. ಇದರ ಜೊತೆಗೆ ಕರೆನ್ಸಿ ಯ ನಿಯಂತ್ರಕನ ನೆಲೆಯಲ್ಲಿ ರಿಸರ್ವ್ ಬ್ಯಾಂಕು ದಿನಕ್ಕೆ ಒಂದರಂತೆ ಹೊಸ ಹೊಸ ನಿಯಮಗಳನ್ನು ಬ್ಯಾಂಕುಗಳಿಗೆ ಕಳುಹಿಸುತ್ತಿತ್ತು; ಅವುಗಳು ಶಾಖೆಗಳ ಸಿಬ್ಬಂದಿಗಳಲ್ಲಿ ಗೊಂದಲವನ್ನು ಹುಟ್ಟುಹಾಕಿದವು.

ನೋಟು ರದ್ದತಿಯು ದೇಶದ ಅರ್ಥವ್ಯವಸ್ಥೆಯನ್ನು ಸಂಪೂರ್ಣ ಅಲ್ಲೋಲಕಲ್ಲೋಲ ಮಾಡಿತು. ಅದರಲ್ಲಿಯೂ ಮುಖ್ಯವಾಗಿ ದೇಶದ ಆರ್ಥಿಕತೆಯ ಬೆನ್ನೆಲುಬಾಗಿದ್ದ ಅಸಂಘಟಿತ ವಲಯದಲ್ಲಿರುವ ಸಣ್ಣ ಉದ್ದಿಮೆಗಳು, ವ್ಯಾಪಾರಿಗಳು ಮತ್ತು ಸೇವಾ ಕೇಂದ್ರಗಳು ತೀವ್ರವಾದ ಹಣಕಾಸಿನ ಬಿಕ್ಕಟ್ಟಿಗೆ ಸಿಲುಕಿದವು. ಕಚ್ಚಾ ವಸ್ತುಗಳನ್ನು ನಗದಿನಲ್ಲಿ ಮತ್ತು ಕೆಲವೊಮ್ಮೆ ಸಾಲದಲ್ಲಿ ಪಡಕೊಂಡು ಸಿದ್ಧವಸ್ತುಗಳನ್ನು ಉತ್ಪಾದಿಸುತ್ತಿದ್ದ ಘಟಕಗಳು ವಹಿವಾಟು ನಡೆಸಲು ಸಾಧ್ಯವಾಗದೆ ನಷ್ಟ ಅನುಭವಿಸಿದವು. ನಗದಿನ ಕೊರತೆಯಿಂದಾಗಿ ತಾವು ಉತ್ಪಾದಿಸಿದ ಸಿದ್ಧವಸ್ತುಗಳ ಮಾರಾಟಕ್ಕೆ ವಿಘ್ನವುಂಟಾಯಿತು. ವರದಿಗಳ ಪ್ರಕಾರ ನೋಟು ರದ್ದತಿಯ ಘೋಷಣೆಯ ಬಳಿಕದ ಐದು ತಿಂಗಳಿನಲ್ಲಿ ವ್ಯವಹಾರದಲ್ಲಿ ಆದ ನಷ್ಟವನ್ನು ಭರಿಸಲು ಅಸಾಧ್ಯವಾಗಿ ಲಕ್ಷಾಂತರ ಸಣ್ಣ ಉದ್ದಿಮೆಗಳು ಬಾಗಿಲು ಹಾಕಿದವು. ಎಂಎಸ್‌ಎಂಇ ವಲಯದ ಉದ್ದಿಮೆಗಳು ಶೇ. 60 ಉದ್ಯೋಗಗಳನ್ನು ಕಡಿತಮಾಡಿದವು. ಇದರಿಂದ ನೋಟು ರದ್ದತಿಯ ದುಷ್ಪರಿಣಾಮದ ತೀವ್ರತೆಯನ್ನು ಅರ್ಥಮಾಡಿಕೊಳ್ಳಬಹುದು. ಇವುಗಳನ್ನೆಲ್ಲ ಗಮನದಲ್ಲಿಟ್ಟುಕೊಂಡೇ ದಿವಂಗತ ಮನಮೋಹನ್ ಸಿಂಗ್ ಅವರು ನೋಟು ರದ್ದತಿಯು ದೇಶದ ಆರ್ಥಿಕತೆಯನ್ನು ಶೇ. 2ರಷ್ಟು ಕುಗ್ಗಿಸಲಿದೆ ಎಂದು ಕರಾರುವಾಕ್ಕಾಗಿ ಭವಿಷ್ಯ ನುಡಿದಿದ್ದರು.

ನೋಟುರದ್ದತಿಯ ಘನ ಉದ್ದೇಶವಾದ ಕಾಳಧನದ ಬಳಕೆಯು 2016ರ ನಂತರ ಕಡಿಮೆಯಾದುದರ ಬಗ್ಗೆ ವರದಿಗಳು ಇಲ್ಲ; ಬದಲಾಗಿ ಚುನಾವಣಾ ಆಯೋಗದ ಅಧಿಕಾರಿಗಳು ಚುನಾವಣೆಗಳ ಸಂದರ್ಭದಲ್ಲಿ ಕಳ್ಳಹಣವನ್ನು ಪತ್ತೆ ಹಚ್ಚಿ ಮುಟ್ಟುಗೋಲು ಹಾಕಿದ ಘಟನೆಗಳು ಚುನಾವಣೆಯಿಂದ ಚುನಾವಣೆಗೆ ಹೆಚ್ಚುತ್ತಲೇ ಇವೆ. ರಾಜಕಾರಣಿಗಳನ್ನು ಅಕ್ರಮಸಂಪತ್ತನ್ನು ಹೊಂದಿದ್ದಾರೆಂಬ ಆರೋಪದಲ್ಲಿ ಪ್ರವರ್ತನ ನಿರ್ದೇಶನಾಲಯದ ಅಧಿಕಾರಿಗಳು ಬಂಧಿಸಿದ ಘಟನೆಗಳು ಹೆಚ್ಚಾಗಿವೆ-ಅವರು ಆಳುವ ಪಕ್ಷಕ್ಕೆ ಹಾರಿದರೆ ಆರೋಪಗಳು ತನ್ನಿಂದ ತಾನೇ ಬಿದ್ದೂ ಹೋಗುತ್ತವೆ.

ಚಲಾವಣೆಯಲ್ಲಿರುವ ಕರೆನ್ಸಿ ಯ ಪ್ರಮಾಣವೂ ವರ್ಷದಿಂದ ವರ್ಷಕ್ಕೆ ಏರುತ್ತಾ ಹೋಗಿದೆ. 2016ರಲ್ಲಿ ಇದ್ದುದರ ಎರಡು ಪಟ್ಟು ನೋಟುಗಳು ಇಂದು ಚಲಾವಣೆಯಲ್ಲಿ ಇವೆ. ನೋಟು ರದ್ದತಿಯ ಬಳಿಕ ಪುನಃ ಬಿಡುಗಡೆ ಮಾಡಿದ ರೂ.500ರ ಮುಖಬೆಲೆಯ ನೋಟುಗಳ ಪ್ರಮಾಣವೇ ಎಲ್ಲಕ್ಕಿಂತ ಅಧಿಕವಿದೆ. ಇನ್ನೊಂದು ಮಾನಕವೂ ಗಮನಾರ್ಹ. ಚಲಾವಣೆಯಲ್ಲಿರುವ ನೋಟುಗಳು 2016ರ ಸಮಯದಲ್ಲಿ ದೇಶದ ಜಿಡಿಪಿಯ ಸುಮಾರು ಶೇ.12.1 ಇತ್ತು. 2017ರಲ್ಲಿ ಅದು ಶೇ.8.7ಕ್ಕೆ ಕುಸಿದು ಆ ಬಳಿಕ ನಿರಂತರ ವೃದ್ಧಿಸಿ ಈಗ ಶೇ.12ಕ್ಕೆ ಮತ್ತೆ ತಲಪಿದೆ. ಅದರ ಅರ್ಥ ನೋಟು ರದ್ದತಿಯಿಂದ ಕರೆನ್ಸಿ ಯ ಬಳಕೆ ಕಡಿಮೆಯಾಗುವುದರ ಬದಲಿಗೆ ಹೆಚ್ಚಾಗಿದೆ.

ನೋಟು ರದ್ದತಿಯ ಮೂಲಕ ನಗದು ವ್ಯವಹಾರದ ಬದಲು ಡಿಜಿಟಲ್ ಮಾಧ್ಯಮದ ಬಳಕೆ ಹೆಚ್ಚಾಗುವಂತೆ ಮಾಡುವುದು ಆ ಬಳಿಕ ಸೇರಿಸಿದ ಇನ್ನೊಂದು ಉದ್ದೇಶವಾಗಿತ್ತು. ಯುಪಿಐ ಮೂಲಕ ಪಾವತಿಗಳು ಹೋದ 10 ವರ್ಷಗಳಲ್ಲಿ ಬಹಳಷ್ಟು ಜನಪ್ರಿಯವಾಗಿವೆ; ಈ ಸಾಧನೆಯನ್ನು ಅಲ್ಲಗಳೆಯುವಂತಿಲ್ಲ. ಆದರೆ ಸರಕಾರದ ಇತ್ತೀಚೆಗಿನ ನಿರ್ಧಾರದ ಪ್ರಕಾರ ರೂ. 2,000 ಮತ್ತು ಹೆಚ್ಚಿನ ಪಾವತಿಗಳ ಮೇಲೆ ಶುಲ್ಕವನ್ನು ವ್ಯಾಪಾರಸ್ಥರ ಮೇಲೆ ಹೇರಲಾಗುತ್ತದೆ. ಇದರ ಬಗ್ಗೆ ಈಗಾಗಲೇ ಸಾಕಷ್ಟು ಟೀಕೆಗಳು ಬಂದಿವೆ. ಆರಂಭದಲ್ಲಿ ಉಚಿತ ಸೇವೆಯನ್ನು ಒದಗಿಸಿ ಅದನ್ನು ಬಳಸುತ್ತಾ ಹೋದಂತೆ ಸೇವಾ ಶುಲ್ಕವನ್ನು ಹೇರುವುದು ಎಷ್ಟು ಸಮಂಜಸ?

ದೇಶದ ಆರ್ಥಿಕ ಚರಿತ್ರೆಯಲ್ಲಿಯೇ ಒಂದು ಕರಾಳ ಘಟನೆ ಅಂದರೆ 2016ರ ನೋಟು ರದ್ದತಿ. ಅತ್ಯಂತ ಗಂಭೀರವಾದ ದುಷ್ಪರಿಣಾಮವನ್ನು ಜನಸಾಮಾನ್ಯರ ಜೀವನದ ಮೇಲೆ ಬೀರುವ ಕಾರಣಕ್ಕಾಗಿಯೇ ಪ್ರಜಾತಂತ್ರಕ್ಕೆ ಬದ್ಧವಾದ ರಾಷ್ಟ್ರಗಳು ಈ ನೋಟುರದ್ದತಿಯ ದಾರಿಯನ್ನು ಹಿಡಿಯುವುದಿಲ್ಲ. ಭಾರತದಲ್ಲಿಯೂ 1946ರ ಬ್ರಿಟಿಷರ ಆಳ್ವಿಕೆಯ ಸಂದರ್ಭದಲ್ಲಿ ಮತ್ತು ಮುಂದೆ 1978ರಲ್ಲಿ ಮಾಡಿದ ನೋಟು ರದ್ದತಿಗಳು ಕಳ್ಳಹಣವನ್ನು ಹೊರತರುವಲ್ಲಿ ಫಲಕಾರಿಯಾಗಿರಲಿಲ್ಲ. ಆದರೆ ಆಗ ರದ್ದತಿಯಾದ ನೋಟುಗಳ ಪ್ರಮಾಣ ಶೇ.1ಕ್ಕಿಂತ ಕಡಿಮೆ ಇದ್ದು ಜನಸಾಮಾನ್ಯರಿಗೆ ಸಂಕಷ್ಟಗಳಾಗಿರಲಿಲ್ಲ. ಇದಕ್ಕೆ ವಿರುದ್ಧವಾಗಿ ನರೇಂದ್ರ ಮೋದಿಯವರ 2016ರ ನೋಟು ರದ್ದತಿಯು ಅತ್ಯಂತ ಅಪಕ್ವ ಮತ್ತು ಅಪ್ರಬುದ್ಧ ಆರ್ಥಿಕ ನಿರ್ಧಾರವೇ ಆಗಿತ್ತು. ನೋಟು ರದ್ದತಿಗೆ ದಶಕ ಸಲ್ಲುವ ಹಿನ್ನೆಲೆಯಲ್ಲಿ ಅರ್ಥವ್ಯವಸ್ಥೆಗೆ ಅದರಿಂದಾದ ಹಾನಿ ಮತ್ತು ಜನಸಾಮಾನ್ಯರಿಗೆ ಒದಗಿದ ಸಂಕಷ್ಟಗಳನ್ನು ನೆನಪಿಸಿಕೊಳ್ಳುವ ಅಗತ್ಯವಿದೆ.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಬೆಳಕಿನ ಹಬ್ಬಕ್ಕೆ ಮಾಲಿನ್ಯದ ಕತ್ತಲು; ದೆಹಲಿ ಜನ ಪಾಠ ಕಲಿಯುವುದು ಯಾವಾಗ?

ವರ್ಷಕ್ಕೊಮ್ಮೆ ಬರುವ ದೀಪಾವಳಿ ಹಬ್ಬವನ್ನು ಕೇವಲ ದೀಪಗಳ ಹಬ್ಬವೆಂದು ನೋಡದೆ, ಬೆಳಕಿನ ಸಂಭ್ರಮದ ಪ್ರತೀಕವಾಗಿಯೂ ಪರಿಗಣಿಸಲಾಗಿದೆ. ಆದರೆ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಈ ಹಬ್ಬ ಪ್ರತಿವರ್ಷವೂ ಉಸಿರುಗಟ್ಟಿಸುವ ನರಕಯಾತನೆಯಾಗಿ ಬದಲಾಗುತ್ತಿರುವುದು ಕಟು ಸತ್ಯ. ದೀಪಾವಳಿಯ ಸಂಭ್ರಮ ಮುಗಿದ ಮರುದಿನವೇ ದೆಹಲಿಯ ಆಕಾಶವು ದಟ್ಟ ಹೊಗೆಯ ಕಂಬಳಿಯಿಂದ ಆವೃತವಾಗುತ್ತದೆ. ಗಾಳಿಯ ಗುಣಮಟ್ಟ ಸೂಚ್ಯಂಕ () 400ರ ಗಡಿ ದಾಟಿ ಅಪಾಯಕಾರಿ ಮಟ್ಟಕ್ಕೆ ಕುಸಿಯುತ್ತದೆ. ಸೋನಿಯಾ ವಿಹಾ,ರ್ ಬುರಾರಿ, ವಿವೇಕ್ ವಿಹಾರ್‌ನಂತಹ ಪ್ರದೇಶಗಳಲ್ಲಿ ಬರೋಬ್ಬರಿ 450ರ ಗಡಿ ದಾಟುತ್ತದೆ. ವಿಶ್ವ ಆರೋಗ್ಯ ಸಂಸ್ಥೆ ನಿಗದಿಪಡಿಸಿದ ಸುರಕ್ಷಿತ ಮಿತಿಯ ಕನಿಷ್ಠ 50 ಪಟ್ಟು ಹೆಚ್ಚು ಹಾನಿಕಾರಕ 2.5 ಸೂಕ್ಷ್ಮ ಕಣಗಳು ದೆಹಲಿಯ ಮಕ್ಕಳ ಹಾಗೂ ವೃದ್ಧರ ಶ್ವಾಸಕೋಶವನ್ನು ಸೇರುತ್ತಿವೆ. ಅಕ್ಷರ್‌ಧಾಮ ಹಾಗೂ ಆನಂದ್ ವಿಹಾರ್‌ನಲ್ಲಿ ಮಾಲಿನ್ಯದ ಪ್ರಮಾಣ 760 ಮೈಕ್ರೋಗ್ರಾಂಗಳಿಗೂ ಅಧಿಕವಾಗಿ ದಾಖಲಾಗಿರುವುದು ಪರಿಸ್ಥಿತಿಯ ಗಂಭೀರತೆಗೆ ಹಿಡಿದ ಕನ್ನಡಿಯಾಗಿದೆ.

ಮನುಷ್ಯನ ಪ್ರಾಣಕ್ಕಿಂತ ಅಥವಾ ಆರೋಗ್ಯಕ್ಕಿಂತ ಹಬ್ಬದ ಆಚರಣೆ ದೊಡ್ಡದಾ ಎಂಬ ಪ್ರಶ್ನೆ ಈಗ ಪ್ರತಿಯೊಬ್ಬರ ಮುಂದೆಯೂ ಗಂಭೀರವಾಗಿ ನಿಂತಿದೆ. ಆದರೆ, ಈ ವಾಯುಮಾಲಿನ್ಯದ ಹಾವಳಿಗೆ ಕೇವಲ ಪಟಾಕಿ ಮಾತ್ರವೇ ಕಾರಣವೇ? ಅಥವಾ ಇದರ ಹಿಂದೆ ದೊಡ್ಡ ರಾಜಕೀಯ ಮತ್ತು ವ್ಯವಸ್ಥೆಯ ವೈಫಲ್ಯವಿದೆಯೇ? ಎಂಬ ಪ್ರಶ್ನೆಯನ್ನೂ ಇದೇ ಸಂದರ್ಭದಲ್ಲಿ ಕೇಳಬೇಕಿದೆ.

ಪ್ರತಿವರ್ಷ ದೀಪಾವಳಿ ಸಮೀಪಿಸುತ್ತಿದ್ದಂತೆ ಸುಪ್ರೀಂ ಕೋರ್ಟ್, ವ್ಯಾಪಾರಿಗಳು ಮತ್ತು ದೆಹಲಿ-ಎನ್‌ಸಿಆರ್ ನಿವಾಸಿಗಳ ನಡುವೆ ಹಗ್ಗಜಗ್ಗಾಟ ನಡೆಸುವುದು ಸಾಮಾನ್ಯವಾಗಿದೆ. ಪರಿಸರ ಪ್ರೇಮಿಗಳು ಮತ್ತು ನ್ಯಾಯಾಲಯವು ಕಳೆದ ಕೆಲವು ವರ್ಷಗಳಿಂದ ಪಟಾಕಿ ಮಾರಾಟ ಮತ್ತು ಸಿಡಿಸುವುದರ ಮೇಲೆ ನಿಯಂತ್ರಣ ಹೇರಲು ಯತ್ನಿಸುತ್ತಿವೆ. 2018ರಲ್ಲಿ ಸುಪ್ರೀಂ ಕೋರ್ಟ್ ಬೇರಿಯಮ್ ಅಂಶವಿರುವ ಪಟಾಕಿಗಳ ಮೇಲೆ ನಿಷೇಧ ಹೇರಿತ್ತು. ತದನಂತರ ಕೇವಲ ಸಿಎಸ್‌ಐಆರ್-ನೀರಿ (-) ಅಭಿವೃದ್ಧಿಪಡಿಸಿದ ಹಸಿರು ಪಟಾಕಿಗಳಿಗೆ =ಮಾತ್ರ ನಿರ್ದಿಷ್ಟ ಸಮಯದಲ್ಲಿ (ರಾತ್ರಿ 8ರಿಂದ 10ರವರೆಗೆ) ಅನುಮತಿ ನೀಡುತ್ತಾ ಬಂದಿದೆ.

ಆದರೆ, ವಾಸ್ತವದಲ್ಲಿ ಈ ಹಸಿರು ಪಟಾಕಿ ಎಂಬ ಪರಿಕಲ್ಪನೆಯೇ ಒಂದು ದೊಡ್ಡ ಹಗರಣವಾಗಿ ಮಾರ್ಪಟ್ಟಿದೆ. ಮಾರುಕಟ್ಟೆಯಲ್ಲಿ ಸಿಗುವ ಶೇಕಡಾವಾರು ಪಟಾಕಿಗಳ ಡಬ್ಬಿಗಳ ಮೇಲೆ ಗ್ರೀನ್ ಅಥವಾ ಪರಿಸರ ಸ್ನೇಹಿ ಎಂಬ ಸುಳ್ಳು ಕ್ಯೂಆರ್ ಕೋಡ್ ಸ್ಟಿಕ್ಕರ್‌ಗಳನ್ನು ಅಂಟಿಸಿ ಮಾರಾಟ ಮಾಡಲಾಗುತ್ತದೆ. ದೆಹಲಿಯಲ್ಲಿ ಪಟಾಕಿಗಳ ಮೇಲಿನ ಕನಿಷ್ಠ ಪರೀಕ್ಷಾ ಸೌಲಭ್ಯಗಳೂ ಇಲ್ಲದಿರುವುದರಿಂದ, ನಿಷೇಧಿತ ಸಾಮಾನ್ಯ ಪಟಾಕಿಗಳೇ ಹಸಿರು ಪಟಾಕಿಗಳೆಂಬ ನಾಮಫಲಕದೊಂದಿಗೆ ಯದ್ವಾತದ್ವಾ ಮಾರಾಟವಾಗುತ್ತವೆ. ಇನ್ನು ರಾತ್ರಿ 10ರ ನಂತರವೂ ಸುಪ್ರೀಂ ಕೋರ್ಟ್ ಆದೇಶವನ್ನು ಉಲ್ಲಂಘಿಸಿ ಎಗ್ಗಿಲ್ಲದೆ ಪಟಾಕಿಗಳನ್ನು ಸಿಡಿಸಲಾಗುತ್ತದೆ. ಪೋಲಿಸರು ಮತ್ತು ಆಡಳಿತ ವ್ಯವಸ್ಥೆಯು ಕಣ್ಣುಮುಚ್ಚಿ ಕುಳಿತಿರುವುದರಿಂದ ಕಾಗದದ ಮೇಲಿನ ನಿಷೇಧಗಳು ನೆಲಮಟ್ಟದಲ್ಲಿ ಸಂಪೂರ್ಣ ವಿಫಲವಾಗುತ್ತಿವೆ.

ದೆಹಲಿಯ ವಾಯುಮಾಲಿನ್ಯಕ್ಕೆ ಕೇವಲ ಪಟಾಕಿ ಮಾತ್ರವೇ ಏಕೈಕ ಕಾರಣವಲ್ಲ. ಇಲ್ಲಿ ಪ್ರಕೃತಿಯೂ ಒಂದು ರೀತಿಯಲ್ಲಿ ಪ್ರತಿಕೂಲ ಪರಿಸ್ಥಿತಿಯಲ್ಲಿದೆ. ದೆಹಲಿಯ ಉತ್ತರದಲ್ಲಿ ಹಿಮಾಲಯ ಪರ್ವತಗಳಿದ್ದರೆ, ಪಶ್ಚಿಮ ಹಾಗೂ ದಕ್ಷಿಣದಲ್ಲಿ ಅರವಲ್ಲಿ ಬೆಟ್ಟಗಳಿವೆ. ಚಳಿಗಾಲ ಆರಂಭವಾಗುತ್ತಿದ್ದಂತೆ ತಾಪಮಾನ ಕುಸಿಯುತ್ತದೆ, ಗಾಳಿಯ ವೇಗ ತೀರಾ ಕಡಿಮೆಯಾಗುತ್ತದೆ. ಇದರಿಂದಾಗಿ ಗಾಳಿಯ ಸಂಚಾರ ಸೂಚ್ಯಂಕ ದಿನದಿಂದ ದಿನಕ್ಕೆ ಕುಸಿದು, ಹೊಗೆ ಹಾಗೂ ದೂಳು ಮೇಲಕ್ಕೆ ಹೋಗದೆ ಕೆಳಸ್ತರದಲ್ಲೇ ಸಿಕ್ಕಿಹಾಕಿಕೊಳ್ಳುತ್ತದೆ.



ಇದರ ಜೊತೆಗೆ ಪಂಜಾಬ್ ಮತ್ತು ಹರಿಯಾಣ ರಾಜ್ಯಗಳಲ್ಲಿ ರೈತರು ಅಕ್ಟೋಬ-ರ್ನವೆಂಬರ್ ತಿಂಗಳುಗಳಲ್ಲಿ ಭತ್ತದ ಗದ್ದೆಗಳನ್ನ ಸುಡುವುದು ಮಾಲಿನ್ಯದ ಪ್ರಮಾಣವನ್ನು ಮತ್ತಷ್ಟು ಉಲ್ಬಣಗೊಳಿಸುತ್ತದೆ. ಆದರೆ ಡಿಸೆಂಬರ್ ಮತ್ತು ಜನವರಿಯಲ್ಲಿ ಗದ್ದೆಗಳನ್ನ ಸುಡುವುದು ನಿಂತರೂ ದೆಹಲಿಯಲ್ಲಿ ಮಾಲಿನ್ಯ ಮುಂದುವರಿಯುತ್ತದೆ. ಇದಕ್ಕೆ ಪ್ರಮುಖ ಕಾರಣಗಳೂ ಇವೆ.

ವಾಹನಗಳ ಹೊಗೆ, ಕೈಗಾರಿಕಾ ತ್ಯಾಜ್ಯ ಮತ್ತು ಕಸ ಕೊಳೆಯುವಿಕೆಯಿಂದ ಬಿಡುಗಡೆಯಾಗುವ ಅನಿಲಗಳು ಪರಸ್ಪರ ವರ್ತಿಸಿ ವಾತಾವರಣದಲ್ಲೇ ಹೊಸ ವಿಷಕಾರಿ ಕಣಗಳನ್ನು ಸೃಷ್ಟಿಸುತ್ತವೆ. ಇದೆಲ್ಲದರ ನಡುವೆ ದೀಪಾವಳಿಯ ಪಟಾಕಿ ಹೊಗೆಯೂ ಸೇರಿ, ಪರಿಸ್ಥಿತಿಯನ್ನು ಮತ್ತಷ್ಟು ಬಿಗಡಾಯಿಸುತ್ತವೆ.

ದೆಹಲಿಯಲ್ಲಿ ವಾಯುಮಾಲಿನ್ಯ ತೀವ್ರಗೊಂಡಾಗಲೆಲ್ಲ ಆಡಳಿತ ಪಕ್ಷ ಮತ್ತು ವಿರೋಧ ಪಕ್ಷಗಳ ನಡುವೆ ನಡೆಯುವುದು ರಾಜಕೀಯ ಕೆಸರೆರೆಚಾಟವೇ ಹೊರತು ಶಾಶ್ವತ ಪರಿಹಾರ ಸಿಗುವುದಿಲ್ಲ. ಮಾಲಿನ್ಯ ನಿಯಂತ್ರಣಕ್ಕೆ ಜಿಆರ್‌ಎಪಿ ನಿಯಮಗಳನ್ನು ಜಾರಿಗೆ ತರಲಾಗುತ್ತದೆ, ವಾಹನಗಳಿಗೆ ಪಿಯುಸಿ () ಕಡ್ಡಾಯಗೊಳಿಸುವುದು, ಪಾರ್ಕಿಂಗ್ ಶುಲ್ಕ ದ್ವಿಗುಣಗೊಳಿಸುವುದು, ಕಚೇರಿ ಸಮಯ ಬದಲಾವಣೆ ಮತ್ತು ನಿರ್ಮಾಣ ಕಾರ್ಯಗಳಿಗೆ ತಡೆ ನೀಡುವುದನ್ನು ತಾತ್ಕಾಲಿಕವಾಗಿ ಮಾಡಲಾಗುತ್ತದೆ. ಆದರೆ ಇವುಗಳ ಸರಿಯಾದ ಅನುಷ್ಠಾನ ಮಾತ್ರ ಕಾಗದದಲ್ಲೇ ಉಳಿಯುತ್ತದೆ.

ಈ ನಿಟ್ಟಿನಲ್ಲಿ ಭಾರತವು ಚೀನಾ ದೇಶದ ಹಿಂದಿನ ಪರಿಸರ ಹೋರಾಟದ ಮಾದರಿಯಿಂದ ಪಾಠ ಕಲಿಯಬೇಕಿದೆ. ಒಂದು ಕಾಲದಲ್ಲಿ ಬೀಜಿಂಗ್ ನಗರವೂ ವಿಶ್ವದ ಅತ್ಯಂತ ಕಲುಷಿತ ನಗರಗಳಲ್ಲಿ ಒಂದಾಗಿತ್ತು. ಆದರೆ ಚೀನಾ ಸರ್ಕಾರವು ಕಲ್ಲಿದ್ದಲು ಬಳಕೆಯನ್ನು ಕಟ್ಟುನಿಟ್ಟಾಗಿ ನಿಯಂತ್ರಿಸಿ, ಸಾರಿಗೆಯನ್ನು ವಿದ್ಯುದೀಕರಿಸಿ, ಕಟ್ಟುನಿಟ್ಟಾದ ಡಿಜಿಟಲ್ ಮತ್ತು ಜಂಟಿ ಪ್ರಾದೇಶಿಕ ನಿಯಂತ್ರಣ ಕ್ರಮಗಳನ್ನು ಜಾರಿಗೆ ತರುವ ಮೂಲಕ ಗಾಳಿಯನ್ನು ಶುದ್ಧಗೊಳಿಸಿತು. ಭಾರತದಲ್ಲೂ ರಾಜಕೀಯ ಇಚ್ಛಾಶಕ್ತಿ ಮತ್ತು ಕಠಿಣ ಕಾನೂನು ಅನುಷ್ಠಾನವಿಲ್ಲದೆ ಕೇವಲ ದೋಷಾರೋಪಣೆಗಳಿಂದ ಮಾತ್ರ ಮಾಲಿನ್ಯವನ್ನು ತಡೆಯಲು ಸಾಧ್ಯವಿಲ್ಲ.

ಹಬ್ಬದ ಆಚರಣೆಯ ಹೆಸರಿನಲ್ಲಿ ಕೋಟ್ಯಂತರ ರೂ.ಗಳನ್ನು ಸುಟ್ಟು, ಕೇವಲ ಮೂರು ಗಂಟೆಗಳ ಕಾಲ ಪಟಾಕಿ ಸಿಡಿಸಿ ಆನಂದಿಸುವುದರಿಂದ ನಮಗೆ ನಾವೇ ವಿಷವನ್ನು ಸೇವಿಸಿದಂತೆ. ಕೋವಿಡ್ ಕಾಲದಲ್ಲಿ ಜನರು ಮಾಸ್ಕ್ ಧರಿಸಿ ಬದುಕುವುದನ್ನು ಕಲಿತಿದ್ದರು. ಆದರೆ ಇಂದು ಚಳಿಗಾಲ ಬಂದರೆ ಸಾಕು, ದೆಹಲಿವಾಸಿಗಳು ಉಸಿರಾಡಲು ಏರ್ ಪ್ಯೂರಿಫೈರ್‌ಗಳನ್ನು ಅವಲಂಬಿಸಬೇಕಾದ ಅನಿವಾರ್ಯತೆ ಇದೆ. ಸರ್ಕಾರದ ಕ್ರಮಗಳಷ್ಟೇ ಅಲ್ಲ, ಪ್ರತಿಯೊಬ್ಬ ನಾಗರಿಕನೂ ಆತ್ಮಾವಲೋಕನ ಮಾಡಿಕೊಳ್ಳಬೇಕಾದ ಸಮಯವಿದು.

ದೀಪಾವಳಿಯೆಂದರೆ ಬರೀ ಪಟಾಕಿಗಳನ್ನ ಸಿಡಿಸಿ ಶಬ್ದ ಮಾಲಿನ್ಯ ಮಾಡುವುದಲ್ಲ, ಬದಲಾಗಿ ದೀಪಗಳನ್ನು ಬೆಳಗಿ, ಕತ್ತಲನ್ನು ಹೋಗಲಾಡಿಸುವುದು. ಹಬ್ಬದ ಮೂಲ ಆಶಯಕ್ಕೆ ಚ್ಯುತಿ ಬಾರದಂತೆ, ಪರಿಸರ ಸ್ನೇಹಿಯಾಗಿ ಹಬ್ಬವನ್ನು ಆಚರಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ನಮ್ಮ ಮುಂದಿನ ಪೀಳಿಗೆಗೆ ವಿಷಪೂರಿತ ಗಾಳಿಯನ್ನು ಬಿಟ್ಟುಹೋಗುವ ಬದಲು, ಶುದ್ಧ ಗಾಳಿಯನ್ನು ಉಸಿರಾಡುವ ಹಕ್ಕನ್ನು ಕಲ್ಪಿಸಿಕೊಡುವ ಪ್ರಾಮಾಣಿಕ ಪ್ರಯತ್ನ ಇಂದಿನ ತುರ್ತು ಅವಶ್ಯಕತೆಯಾಗಿದೆ.



ಆತ್ಮ ಜ್ಯೋತಿ ಬೆಳಗಲಿ

ದೀಪಾವಳಿ ವಿಶ್ವದಾದ್ಯಂತ ಅತಿ ದೊಡ್ಡ ಹಬ್ಬವಾಗಿದ್ದು, ಹಿಂದೂ, ಜೈನ, ಬುದ್ಧ ಮತ್ತು ಸಿಖ್ ಧರ್ಮಗಳಲ್ಲಿ ಈ ಹಬ್ಬಕ್ಕೆ ಮಹತ್ವ ಇದೆ. ಭಾರತ, ನೇಪಾಳ, ಶ್ರೀಲಂಕಾ, ಮಿಯನ್ಮಾರ, ಮಾರಿಷಿಯಸ್, ಗಯಾನಾ, ಟ್ರಿನಿಡಾಡ್, ಸೂರಿನಾಮ್, ಮಲೇಶಿಯಾ, ಸಿಂಗಾಪುರ ಮತ್ತು ಫಿಜಿ ದೇಶಗಳಲ್ಲಿ ರಾಷ್ಟ್ರೀಯ ರಜೆಯು ಕಲ್ಪಿಸಲಾಗಿದ್ದು ಜನರು ದೀಪಾವಳಿಯು ಸಡಗರ ಸಂಭ್ರಮದಿಂದ ಆಚರಿಸುತ್ತಾರೆ, ನೇಪಾಳದಲ್ಲಿ ಹೊಸ ವರ್ಷ ದೀಪಾವಳಿಗೆ ಶುರುವಾಗುತ್ತದೆ.

ದೀಪಾವಳಿ ದೀಪಗಳ ಹಬ್ಬ ಇದನ್ನು ವಿಕ್ರಮಶಕೆಯ ವರ್ಷದ ಕೊನೆಯಲ್ಲಿ ಆಚರಿಸಲಾಗುತ್ತದೆ, ವಿಕ್ರಮಶಕೆ ಉತ್ತರ ಭಾರತದಲ್ಲಿ ಉಪಯೋಗಿಸಲ್ಪಡುವುದರಿಂದ ಅಲ್ಲಿ ಅಶ್ವಯುಜ ಮಾಸ ಕೃಷ್ಣಪಕ್ಷದ ಚತುರ್ದಶಿ, ಅಮಾವಾಸ್ಯೆ ಹಾಗೂ ಕಾರ್ತಿಕ ಮಾಸ ಶುಕ್ಲಪಕ್ಷದ ಪಾಡ್ಯ □ ಈ ದಿನಗಳಲ್ಲಿ ದೀಪಾವಳಿಯನ್ನು ಆಚರಿಸುತ್ತಾರೆ. ಅಮಾವಾಸ್ಯೆಯ ನಿಖರ ದಿನಾಂಕ ಬೇರೆ ಬೇರೆ ದಿನಗಳಂದು ಆಗಬಹುದು. ಇದರೊಂದಿಗೆ ದೀಪಾವಳಿಯ ದಿನಾಂಕವೂ ಬೇರೆಯಾಗಬಹುದು.

ಜೈನ ಧರ್ಮದಲ್ಲಿ ದೀಪಾವಳಿಯು ದೇವದಿವಾಳಿ ಎಂದು ಹೇಳುತ್ತಾರೆ. ಈ ದಿನ ಕೊನೆಯ ತೀರ್ಥಂಕರನಾದ ಮಹಾವೀರ ಬಿಹಾರ ರಾಜ್ಯದ ಪಾವಪುರಿ ಎಂಬ ಸ್ಥಳದಲ್ಲಿ (15 ಅಕ್ಟೋಬರ ಕ್ರಿ.ಪೂ.527) ನಿರ್ವಾಣ ಅವಸ್ಥೆಗೆ ಹೊದರು. ಕ್ರಿ.ಪೂ. 3ನೇ ಶತಮಾನದಲ್ಲಿ ಆಚಾರ್ಯ ಭದ್ರಬಾಹುವಿನಿಂದ ರಚಿತವಾದ ಕಲ್ಪಸೂತ್ರ ಗ್ರಂಥದಲ್ಲಿರುವಂತೆ ಮಹಾವೀರರ ನಿರ್ವಾಣ ಕಾಲದಲ್ಲಿದ್ದ ದೇವತೆಗಳಿಂದ ಅಂಧಕಾರವು ಮರೆಯಾಗಿದ್ದಿತು. ಆದರೆ ಮುಂದಿನ ರಾತ್ರಿ ಗಾಢಾಂಧಕಾರವು ಆವರಿಸಿತು. ತಮ್ಮ ಗುರುವಿನ ಜ್ಞಾನಜ್ಯೋತಿಯ ಸಂಕೇತವಾಗಿ 16 ಗಣ-ಚಕ್ರವರ್ತಿ, 9 ಮಲ್ಲ ಮತ್ತು 9 ಲಿಚ್ಛವಿ ಅವರು ತಮ್ಮ ಗಣರಾಜ್ಯದಲ್ಲಿ ದೀಪ ಬೆಳಗಿಸಿ ದ್ವಾರವನ್ನು ಬೆಳಗಿದರು. ಜೈನರಿಗೆ ಇದು ವರ್ಷದ ಪ್ರಾರಂಭದ ದಿನ. ಆದರೆ ಆಚಾರ್ಯ ಜಿನಸೇನ ಬರೆದಿರುವ ಹರಿವಂಶ ಪುರಾಣದಲ್ಲಿ ದೀಪಾಲಿಕಯಾ (ದೀಪಾವಳಿ) ಬಗ್ಗೆ ಉಲ್ಲೇಖವಿದೆ. ದೀಪಾಲಿಕಯಾ ಎಂದರೆ ಪ್ರಕಾಶವು ದೇಹವನ್ನು ತ್ಯಜಿಸುವುದು.

ಸಿಖ್ ಧರ್ಮದಲ್ಲಿಯೂ ದೀಪಾವಳಿ ಮುಖ್ಯ ಹಬ್ಬ. 1620 ರಲ್ಲಿ ಸಿಕ್ಖರ ಆರನೆಯ ಗುರು ಹರಗೋಬಿಂದ್ ಸಿಂಗ ಗ್ವಾಲಿಯರ್‌ನ ಕೋಟೆಯಲ್ಲಿ ಬಂಧಿತರಾಗಿದ್ದ 52 ರಾಜರನ್ನು ಬಿಡಿಸಿ ತಂದ ದಿನವೆಂದು ಈ ಕಾಲವನ್ನು ಆಚರಿಸಲಾಗುತ್ತದೆ.

ಕಾರ್ತಿಕ ಅಮಾವಾಸ್ಯೆಗೆ ಭಾರತದ ಪ್ರತಿಯೊಂದು ಮನೆಯಲ್ಲಿ ದೀಪಗಳನ್ನು ಬೆಳಗಿಸಿ ಆಬಾಲ ವೃದ್ಧರೂ ಸಂತೋಷ ಪಡುತ್ತಾರೆ. ಎಲ್ಲರೂ ತಮ್ಮ ತಮ್ಮ ಮನೆ, ಗುಡಿ ಗುಂಡಾರಗಳನ್ನು ಶುಚಿ ಗೊಳಿಸಿ, ಬಣ್ಣಗಳಿಂದ ಶೃಂಗರಿಸುತ್ತಾರೆ, ದೀಪಾವಳಿ ಭಾರತೀಯರ ಒಂದು ದೊಡ್ಡ ಹಬ್ಬ. 'ಆವಳಿ' ಎಂದರೆ ಮಾಲೆ, ಸಾಲು ಎಂದರ್ಥ. ಹಬ್ಬದ ದೃಷ್ಟಿಯಿಂದ ನೋಡಿದರೆ ದೀಪಾವಳಿ ದೀಪಗಳ ಸಾಲಿನಂತೆ ಹಬ್ಬಗಳ ಸಾಲೂ ಹೌದು. ನೀರು ತುಂಬುವ ಹಬ್ಬದಿಂದ ಆರಂಭವಾಗಿ ನರಕಚತುರ್ದಶಿ, ಧನತೇರಸ, ಬಲಿಪಾಡ್ಯಮಿ, ಭಾವನಬಿದಿಗೆ, ಅಕ್ಕನ ತದಿಗೆ, ಪಂಚಮಿಯ ವರೆಗೆ ಪ್ರತಿದಿನವೂ ಹಬ್ಬ.

ವ್ಯಾಪಾರಸ್ಥರು ತಮ್ಮ ಹಳೆ ಖಾತೆಗಳನ್ನು ಮುಕ್ತಾಯ ಮಾಡಿ ಹೊಸ ಖಾತೆಯನ್ನು ಪ್ರಾರಂಭ ಮಾಡುತ್ತಾರೆ. ಧನ ದೇವತೆ 'ಲಕ್ಷ್ಮಿ' ಯನ್ನು ಇದೇ ಸಮಯದಲ್ಲಿ ಆವಾಹನೆ ಮಾಡಿ ಪೂಜಿಸಲಾಗುತ್ತದೆ.

ದೀಪಾವಳಿ ಬೆಳಕಿನ ಹಬ್ಬವಾಗಿದ್ದು ದೀಪಗಳಿಗೆ ಈ ಹಬ್ಬದಲ್ಲಿ ವಿಶೇಷ ಮಹತ್ವ ಇದೆ. ದೀಪದಾನವು ಈ ಹಬ್ಬದಲ್ಲಿ ಮಾಡುವ ವಾಡಿಕೆ ಇದೆ, ಸ್ಥೂಲ ದೀಪದ ಜೊತೆಗೆ ಆತ್ಮಜ್ಯೋತಿಯನ್ನು ಬೆಳಗಿಸಿದರೆ ನಮ್ಮ ಜೀವನ ಪರಿಪೂರ್ಣ ವಾಗುತ್ತದೆ. ಪ್ರತಿ ಒಂದು ಹಬ್ಬಕ್ಕೆ ಕನ್ನಡೇ ಅದ ಹಿನ್ನಲೆ ಇದ್ದು, ಆಧ್ಯಾತ್ಮಿಕ ರಹಸ್ಯವನ್ನು ತಿಳಿಸಿಕೊಡುತ್ತವೆ ಜೊತೆಗೆ ಅದನ್ನು ತಮ್ಮ ನಿತ್ಯ ಜೀವನದಲ್ಲಿ ಸಹಜವಾಗಿ ಹೇಗೆ ಅಳವಡಿಸಿಕೊಳ್ಳಬೇಕು ಎನ್ನುವುದನ್ನು ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಹೇಳಲಾಗುತ್ತದೆ. ಅಜ್ಞಾನದ ಕತ್ತಲೆಯಿಂದ ಸತ್ಯ ಜ್ಞಾನದ ಬೆಳಕನ್ನು ನಾವು ಪಡೆದರೆ ನಮ್ಮ ಈ ಮಾನವ ಜನ್ಮ ಸಾರ್ಥಕ.

ದೀಪಾವಳಿಯ 'ಬಲಿ' ರಾಜಾ ಮತ್ತು ನರಕಾಸುರನ ಎರಡು ಕಥೆಗಳು ಲಾಕ್ಷಣಿಕ ಭಾಷೆಯ ರೂಪದಲ್ಲಿ ವರ್ಣನೆ ಮಾಡಲಾಗಿದೆ. ಈಶ್ವರೀಯ ಜ್ಞಾನದ ದೃಷ್ಟಿಯಲ್ಲಿ ನೋಡಿದಾಗ 'ನರಕಾಸುರ' ಮಾಯೆ ಅಥವಾ ಮನೋವಿಕಾರಗಳ ರೂಪವಾಗಿದೆ. ಕಾಮ, ಕ್ರೋಧ, ಲೋಭ, ಮೋಹ, ಹಾಗೂ ಅಹಂಕಾರಗಳು ಅಸುರಿ ಲಕ್ಷಣಗಳು ಮತ್ತು ನರಕದ ದ್ವಾರ ಆಗಿವೆ. ಈ ವಿಕಾರಗಳನ್ನು ಜಯಿಸುವುದು ಎಂದರೆ 'ಬಲಿ' ಕೊಡುವುದು ಎಂದು ಹೇಳಲಾಗುತ್ತದೆ. ವಿಶ್ವದ ಇತಿಹಾಸದಲ್ಲಿ ನಾಲ್ಕು ಯುಗಗಳು ಇವೆ. ಸತ್ಯಯುಗ, ತ್ರೇತಾಯುಗ, ದ್ವಾಪರಯುಗ, ಮತ್ತು ಕಲಿಯುಗ. ಈ ಕಲಿಯುಗದ ಅಂತಿಮ ಸಮಯವು ಪಂಚವಿಕಾರ ಮತ್ತು ಆಸುರಿಗುಣಗಳ ಸಾಮ್ರಾಜ್ಯದ ಸಮಯವಾಗಿದೆ. ಪ್ರತಿಯೊಬ್ಬ ನರ-ನಾರಿಯರ ಮನಸ್ಸಿನ ಮೇಲೆ ವಿಕಾರಗಳ ರಾಜ್ಯ ಇದೆ. ಇದಕ್ಕೆ 'ನರಕಾಸುರ' ಅಥವಾ 'ರಾಜಾಬಲಿಯ' ಅಧಿಪತ್ಯ ಎಂದು ಹೇಳಲಾಗುತ್ತದೆ. ಭಾರತವು ಸತ್ಯಯುಗದಲ್ಲಿ ಸ್ವರ್ಗವಾಗಿತ್ತು ಅಲ್ಲಿನ ಮನುಷ್ಯರೆಲ್ಲರು ದೇವಿ-ದೇವತೆಗಳಾಗಿದ್ದರು. ಅವರೇ ಜನ್ಮ ಮರಣದ ಚಕ್ರದಲ್ಲಿ ಬರುತ್ತಾ ಈಗ ನರಕದಲ್ಲಿ 'ನರಕಾಸುರ' ಅಥವಾ 'ಬಲಿ'ಯ ಅಧೀನರಾಗಿದ್ದಾರೆ. ಆತ್ಮಜ್ಞಾನ ಮತ್ತು ನಿರಾಕಾರ ಶಿವನ ಧ್ಯಾನದಿಂದ ನಾವು ಪುನಃ ಬಂಧನಮುಕ್ತರಾಗಲು ಸಾಧ್ಯವಿದೆ.

ಆತ್ಮಜ್ಞಾನ ಎಂದರೆ ಆತ್ಮದೀಪವನ್ನು ಬೆಳಗಿಸುವುದು. 'ನಾನು ಒಂದು ಜ್ಯೋತಿ, ಹಾಕಿಇಲ್ಲದ ಅತಿಸೂಕ್ಷ್ಮ ಆತ್ಮಜ್ಯೋತಿ. ಶರೀರದ ಹಣೆಯ ಮಧ್ಯದಲ್ಲಿ ಹೊಳೆಯುವ ಚೈತನ್ಯ ಜ್ಯೋತಿ, ದೇಹ ಎಂಬ ರಥದ ಸಾರಥಿ ನಾನು ಆತ್ಮ, ದೇಹದ ಮೂಲಕ ಈ ಸೃಷ್ಟಿ ನಾಟಕದಲ್ಲಿ ಪಾತ್ರ ಅಭಿನಯಿಸುವ ಪಾತ್ರಧಾರಿ ನಾನು. ಈ ರೀತಿ ನಿತ್ಯಚಿಂತನೆ ಮಾಡಬೇಕು. ಇದನ್ನೇ ಆತ್ಮಾನುಭೂತಿ ಎಂದು ಕರೆಯಲಾಗುತ್ತದೆ. ಆತ್ಮಜ್ಯೋತಿಯನ್ನು ಬೆಳಗಿಸಲು ಜ್ಞಾನಘೃತ ಬೇಕು. ಎರಡನೆದಾಗಿ, ಸರ್ವ ಆತ್ಮರ ತಂದೆಯಾದ ಪರಮಜ್ಯೋತಿಯ ಪರಿಚಯು ಅತಿ ಅವಶ್ಯಕ. ಪರಮಾತ್ಮನು ನಿರಾಕಾರ, ಅಯೋನಿಜ, ಅಭೋಕ್ತ, ಅಜನ್ಮ, ಅವ್ಯಕ್ತ ಅಶರೀರಿ, ಅವಿಭಾಜ್ಯ, ಅಮರ, ಅವಿನಾಶಿ, ಸರ್ವಶ್ರೇಷ್ಠನಾದ, ಶಿವನು, ಅವನೇ ಅಲ್ಲಾ, ಅವನೆ ಈಶ್ವರ, ಅವನೇ ಗಾಡ್, ಓಂಕಾರನು, ದೇವನೊಬ್ಬ, ನಾಮ ಹಲವು, ಭಾವ ಒಂದೇ, ಭಾಷೆ ಹಲವು, ನಮ್ಮಲ್ಲೇಕೆ ಭೇದವು. ನಾನು ಹಿಂದು, ನಾನು ಮುಸಲ್ಮಾನ, ಕ್ರಿಶ್ಚನರೆಂಬ ಭೇದವು. ನಾವೆ ನಾಡನಾಳುವಂತಹ ಮಕ್ಕಳಲ್ಲಿ ಜಗಳವೂ. ಬ್ರಹ್ಮ, ವಿಷ್ಣು, ಬಸವ, ಏಸು, ನಾನಕ ಪೈಗಂಬರೆಲ್ಲ ಒಬ್ಬದೇವನ ಮಕ್ಕಳು. ಸರ್ವಧರ್ಮವನ್ನು ಬಿಟ್ಟು, ದೇಹ ಧರ್ಮವನ್ನು ಸುಟ್ಟು, ನಿರಾಕಾರ ಜ್ಯೋತಿರ್ಬಿಂದು ತಂದೆ ಶಿವನ ನೆನೆಸಿದಾಗ ಮುಕ್ತಿ ಮತ್ತು ಜೀವನಮುಕ್ತಿಯು ಪ್ರಾಪ್ತವಾಗುವುದು. ಹೀಗೆ ನಾನು ಆತ್ಮಜ್ಯೋತಿಯಾಗಿ ಪರಮಜ್ಯೋತಿಯನ್ನು ನೆನಪು ಮಾಡುವುದಕ್ಕೆ ಸಹಜ ರಾಜಯೋಗವೆಂದು ಹೇಳುತ್ತಾರೆ.

ದೀಪಾವಳಿಯ ದಿನ ಪ್ರತಿಯೊಬ್ಬರು ತಮ್ಮ ಮನೆಗಳನ್ನು, ಸುಣ್ಣ ಬಣ್ಣಗಳಿಂದ ಶುಚಿಗೊಳಿಸಿ, ದೀಪಾಲಂಕಾರವನ್ನು ಮಾಡುತ್ತಾರೆ. ಅದರ ಜೊತೆಗೆ ಮನಸ್ಸಿನಲ್ಲಿ ಇರುವ ಅಮಾವಾಸ್ಯೆಯ ಪ್ರತೀಕವಾದ ಅಜ್ಞಾನ ಅಂಧಕಾರವನ್ನು ದೂರ ಮಾಡಲು ಅಂತರ ಮನದಲ್ಲಿ ಜ್ಞಾನದ ಜ್ಯೋತಿಯನ್ನು ಬೆಳಗಿಸಬೇಕಾಗಿದೆ. ನಿರಾಕಾರನಾಗಿರುವ ಶಿವನ ಸಂಬಂಧದಿಂದ ಅಂದರೆ ರಾಜಯೋಗದಿಂದ ಅನೇಕ ಶಕ್ತಿಗಳ, ಸರ್ವಗುಣಗಳ ಪ್ರಾಪ್ತಿ ಆಗುತ್ತದೆ. ಆದ್ದರಿಂದಲೇ ಭಕ್ತರು ಭಗವಂತನ ಮುಂದೆ 'ಅಸತೋಮಾ ಸದ್ಗಮಯ ತಮಸೋಮಾ ಜ್ಯೋತಿರ್ಗಮಯ' ಎಂದು ಹಾಡುತ್ತಾರೆ. ದೀಪ ದಾನದ ಅರ್ಥವು ಜ್ಞಾನದಾನವೇ ಆಗಿದೆ. ದೀಪಾವಳಿಯ ದಿನದಂದು ಹೊಸ ಬಟ್ಟೆಗಳನ್ನು ಧರಿಸುತ್ತಾರೆ, ಸಿಹಿಯನ್ನು ಹಂಚುತ್ತಾರೆ, ಹಳೆ ಖಾತೆಯನ್ನು ಸಮಾಪ್ತ ಮಾಡಿ ಹೊಸ ಖಾತೆಯನ್ನು ಶುರು ಮಾಡುತ್ತಾರೆ. ಇದರ ಜೊತೆ ಜೊತೆಗೆ ಹೊಸ ಭಾವ, ಮಧುರ ನುಡಿ, ಸ್ನೇಹ, ಪ್ರೀತಿಯ ಅವಶ್ಯಕತೆ ಇದೆ. ಹಳೆ ಕರ್ಮದ ಖಾತೆಯನ್ನು ರಾಜಯೋಗದ ತಪಸ್ಸಿನ ಬಲದಿಂದ ಸಮಾಪ್ತಿ ಮಾಡಬೇಕಾಗಿದೆ. ನಿರಾಕಾರ ಪರಮಜ್ಯೋತಿ ಪರಮಾತ್ಮನು ಪುನಃ ಪವಿತ್ರತೆ, ಸುಖ ಶಾಂತಿ ಸಮೃದ್ಧಿಯ 'ರಾಮರಾಜ್ಯ' ಸ್ಥಾಪನೆ ಮಾಡುತ್ತಿರುವ ಸಂಕೇತವು ದೀಪಾವಳಿ.

ಶುಭಂ ಕರೋತಿ ಕಲ್ಯಾಣಂ ಆರೋಗ್ಯಂ ಧನ ಸಂಪದಃ
ಶತ್ರು ಬುದ್ಧಿ ವಿನಾಶಾಯ ದೀಪಜ್ಯೋತಿರ್ನಮೋಸ್ತುತೆ
ದೀಪ ಜ್ಯೋತಿಃ ಪರಬ್ರಹ್ಮ ದೀಪ ಜ್ಯೋತಿರ್ಜನಾರ್ದನಃ
ದೀಪೋ ಹರತಿ ಪಾಪಾನಿ ಸಂಧ್ಯಾದೀಪ ನಮೋಸ್ತುತೆ

ನಾವು ಹಚ್ಚುವ ದೀಪ ಬೆಳಕಿನಿಂದ ಮನೋಕಳೆಗಿನ ಅಜ್ಞಾನ ಅವಿವೇಕ, ದುಷ್ಟ ಗುಣಗಳು ನಾಶವಾಗಿ, ಸದ್ಗುಣಗಳು ಹೆಚ್ಚಲಿ, ಎಲ್ಲೆಡೆ ಶಾಂತಿ, ಸಮೃದ್ಧಿ ನೆಲಸಲಿ,ಎಲ್ಲರಿಗೂ ಮಂಗಳವಾಗಲಿ, ದೀಪದಲ್ಲಿ ನಮಗೆ ದೇವರ ರೂಪ ಕಾಣಿಸಲಿ ಎಂದು ಆಶಿಸುತ್ತಾ ದೀಪಾವಳಿಯ ದೀಪ ಹಚ್ಚಬೇಕು.

ಹಾಗಾದರೆ ಬನ್ನಿ ನಾವು ಈ ವರ್ಷದ ದೀಪಾವಳಿಯನ್ನು ಆತ್ಮದೀಪವನ್ನು ಬೆಳಗಿಸಿ, ಈಶ್ವರಾನುಭೂತಿಯನ್ನು ಮಾಡುತ್ತಾ ಅನ್ಯರಿಗೂ ಜ್ಞಾನದೀಪವನ್ನು ದಾನ ಮಾಡಿ ಆಚರಿಸೋಣ.

—ವಿಶ್ವಾಸ ಸೋಹೋನಿ., ಬ್ರಹ್ಮಾಕುಮಾರಿಸ್, ಮೀಡಿಯಾ ವಿಂಗ್,

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR